ಸಂಪುಟ : 10 ಸಂಚಿಕೆ: 146 ಪುಟ : 4+2 ಬೆಲೆ: 3.00 ರವಿವಾರ ಜುಲೈ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 146 Pages : 4+2 Price : 3.00 Sunday July 13 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

**ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ಪದಾಧಿಕಾರಿಗಳ ಪದಗ್ರಹಣ ಸಮಾರಂಭ 'ಯುವಧ್ವನಿ' ಉದ್ಘಾಟಿಸಿದ ಪ್ರಿಯಾಂಕ್ ಖರ್ಗೆ ಆರೋಪ**

# ಸಾವರ್ಕರರನ್ನು ಪ್ರಶ್ನಿಸಿದರೆ ದೇಶದ್ರೋಹಿಯಾಗಬೇಕಾಗುತ್ತದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗುಜರಾತ್‌ನಿಂದ ಜರ್ಮನಿಯವರೆಗೆ ಎಲ್ಲೆಡೆ ಮಹಾತ್ಮ ಗಾಂಧಿ ಪ್ರತಿಮೆ ಇದೆ. ಆದರೆ ಬಿಜೆಪಿಯವರಿಗೆ ಗೋಡ್ಸೆ ಬೇಕು, ವೀರ ಸಾವರ್ಕರ್ ಬೇಕು. ಮತ್ತೆ, ಗಾಂಧೀಜಿ ದೇಶದ್ರೋಹಿಯೇ? ಗಾಂಧೀಜಿ ಅವರಿಗೆ ಮಹಾತ್ಮ ಬಿರುದು ಕೊಟ್ಟವರು ಯಾರು ಎನ್ನುವುದು ಗೊತ್ತಿದೆ. ಸುಭಾಶ್ಚಂದ್ರ ಬೋಸ್ ಅವರಿಗೆ ನೇತಾಜಿ ಬಿರುದು ಯಾರು ಕೊಟ್ಟಿದ್ದಾರೆ ಎನ್ನುವ ಮಾಹಿತಿ ಇದೆ. ಆದರೆ ಸಾವರ್ವಕರ್ ಅವರಿಗೆ ವೀರ ಎಂಬ ಬಿರುದು ಕೊಟ್ಟವರು ಯಾರು ಎಂದು ಪ್ರಶ್ನಿಸಿದರೆ, ದೇಶದ್ರೋಹಿ ಎಂಬ ಪಟ್ಟ ಕಟ್ಟುತ್ತಾರೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದರು.

ನಗರದ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಶನಿವಾರ ಗದಗ ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ 'ಯುವಧ್ವನಿ' ಉದ್ಘಾಟಿಸಿ ಅವರು ಮಾತನಾಡಿ, 2014ರಿಂದ ಈಚೆಗೆ ಆರ್‌ಎಸ್‌ಎಸ್, ವೀರ ಸಾವರ್ಕರ್ ಬಗ್ಗೆ ಪ್ರಶ್ನಿಸಿದರೆ ದೇಶದ್ರೋಹಿ ಎನ್ನುವ ಹಣೆಪಟ್ಟಿ ಕಟ್ಟಲಾಗುತ್ತಿದೆ. ರಾಷ್ಟ್ರ ನಿರ್ಮಾಣದಲ್ಲಿ ಕೈ ಜೋಡಿಸದ ಸಂಘಟನೆಗಳು ಇವತ್ತು ದೇಶಭಕ್ತಿಯ ಸರ್ಟಿಫಿಕೇಟ್ ಕೊಡುವಂತಾಗಿದೆ ಎಂದು ಆರೋಪಿಸಿದರು.

ಸಾವರ್ಕರ್ ತಮಗೆ ತಾವೇ ವೀರ ಎನ್ನುವ ಬಿರುದು ಕೊಟ್ಟುಕೊಂಡಿದ್ದಾರೆ. ಬ್ರಿಟಿಷರಿಂದ 60 ರೂ ಪಿಂಚಣಿ ಪಡೆದವರು, ಮುಸ್ಲಿಂರಿಗೆ ಪ್ರತ್ಯೇಕ ದೇಶ ಬೇಕು ಎಂದು ಮೊದಲು ಘೋಷಣೆ ಮಾಡಿದ್ದು ಸಾವರ್ಕರ್. ಅಂಡಮಾನ್ ಜೈಲಿನಲ್ಲಿದ್ದ 80 ಸಾವಿರ ಜನರ ಪೈಕಿ ಮೂವರು ಮಾತ್ರ ಬ್ರಿಟಿಷರಿಗೆ ಕ್ಷಮಾಪಣೆ ಪತ್ರ ಬರೆದು ಬಿಡುಗಡೆಗೆ ವಿನಂತಿಸಿದರು. ಆ ಮೂವರಲ್ಲಿ ಸಾವರ್ಕರ್ ಮೊದಲಿಗರಾಗಿದ್ದು, ಆರು ಬಾರಿ ಕ್ಷಮಾಪಣೆ ಪತ್ರ ಬರೆದಿದ್ದಾರೆ. ಅಂಥವರನ್ನು ಬಿಜೆಪಿ ಹೊತ್ತು ಮೆರೆಸುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಕಾಂಗ್ರೆಸ್ ನುಡಿದಂತೆ ನಡೆದ ಪಕ್ಷ. ಇಂದಿರಾ ಗಾಂಧಿ ಕಾಲದಲ್ಲಿ 20 ಅಂಶಗಳ ಕಾರ್ಯಕ್ರಮ ಘೋಷಣೆ ಮಾಡಿ ಬಡತನ ನಿರ್ಮೂಲನೆಗೆ ನಾಂದಿ ಹಾಡಿದರು. ಸಿದ್ದರಾಮಯ್ಯ ಯುವಕರಿಗಾಗಿ ಯುವನಿಧಿ ಯೋಜನೆ ಸಹಿತ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಬಡವರನ್ನು ಬಡತನ ರೇಖೆಗಿಂತ ಮೇಲಕ್ಕೆ ತರುವ ಕೆಲಸ ಮಾಡಿದ್ದಾರೆ ಎಂದರು.



ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ರಾಜಕಾರಣದಲ್ಲಿ ಮಹಾತ್ಮ ಗಾಂಧೀಜಿ ಅವರ ಆಶಯದಂತೆ ನಡೆಯುತ್ತಿರುವ ದೇಶದ ಏಕೈಕ ಪಕ್ಷ ಕಾಂಗ್ರೆಸ್. ಇಂಥ ಪಕ್ಷದ ಯುವ ಕಾರ್ಯಕರ್ತರು ಸೇವಾ ಮನೋಭಾವದಿಂದ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುವಂತಾಗಲಿ ಎಂದು ಆಶಿಸಿದರು.

ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ರೋಣ ಶಾಸಕ ಜಿ.ಎಸ್. ಪಾಟೀಲ, ಶಾಸಕ ಎನ್.ಎಚ್. ಕೋನರೆಡ್ಡಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ಯುವ ಘಟಕದ ರಾಜ್ಯಾಧ್ಯಕ್ಷ ಮಂಜುನಾಥಗೌಡ, ದೀಪಿಕಾ ರೆಡ್ಡಿ, ಎಂ.ಡಿ. ಸೌದಾಗರ್, ಮೋಹನ ಅಸುಂಡಿ, ಮುಖಂಡರಾದ ಎ.ಎಂ. ಹಿಂಡಸಗೇರಿ, ಐ.ಎಸ್. ಪಾಟೀಲ, ಸುಜಾತಾ ದೊಡ್ಡಮನಿ, ಅಕ್ಬರಸಾಬ್ ಬಬರ್ಚಿ, ವಾಸಣ್ಣ ಕುರುಡಗಿ, ಸಚಿನ್ ಪಾಟೀಲ, ವಿವೇಕ ಯಾವಗಲ್, ಪೀರಸಾಬ ಕೌತಾಳ, ಮಿಥುನ್ ಪಾಟೀಲ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸಿದ್ದು ಪಾಟೀಲ, ಕೃಷ್ಣಾ ಪರಾಪುರ, ಶಕುಂತಲಾ ಅಕ್ಕಿ ಇತರರು ಉಪಸ್ಥಿತರಿದ್ದರು.

ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ಪ್ರತಿನಿಧಿಗಳಿಗೆ ಶಾಸಕ ಜಿ.ಎಸ್. ಪಾಟೀಲ ಪ್ರಮಾಣವಚನ ಬೋಧಿಸಿದರು. ಸಲೀಂ ಅಹ್ಮದ್ 'ಯುವ ಸಂಕಲ್ಪ' ಆ್ಯಪ್ ಬಿಡುಗಡೆಗೊಳಿಸಿದರು. ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಸ್ವಾಗತಿಸಿದರು. ಯುವ ಘಟಕದ ನೂತನ ಜಿಲ್ಲಾಧ್ಯಕ್ಷ ಕೃಷ್ಣಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

> ನರೇಂದ್ರ ಮೋದಿ ನೇತೃತ್ವದ ಸರಕಾರ ಕಳೆದ 11 ವರ್ಷಗಳಿಂದ ಯಾವುದೇ ಹೊಸ ಯೋಜನೆಗಳನ್ನು ಘೋಷಣೆ ಮಾಡಿಲ್ಲ. ಹಿಂದಿನ ಸರಕಾರದ ಯೋಜನೆಗಳಿಗೆ ಹೊಸ ಹೆಸರು ಕೊಡುವ ಕೆಲಸವನ್ನಷ್ಟೇ ಮೋದಿ ಮಾಡಿದ್ದಾರೆ. ಯುವಕರು ಈ ಬಗ್ಗೆ ಜಾಗೃತರಾಗಬೇಕು. ಸಾಮಾಜಿಕ ಜಾಲತಾಣದಲ್ಲಿ ಬರುವ ವಿಷಯಗಳನ್ನು ಪರಾಮರ್ಶಿಸುವ ಕೆಲಸ ಮಾಡಬೇಕು.
>
> – **ಪ್ರಿಯಾಂಕ್ ಖರ್ಗೆ.**
> **ಗ್ರಾಮೀಣಾಭಿವೃದ್ಧಿ ಸಚಿವರು.**

> ನಮ್ಮ ವಿರೋಧ ಪಕ್ಷಗಳು ಜನರನ್ನು ವಿಭಜಿಸಿ, ಜಾತಿ-ಧರ್ಮದ ಮೇಲೆ ಚುನಾವಣೆಯನ್ನು ಗೆಲ್ಲಬಹುದು ಎಂದುಕೊಂಡಿದ್ದರೆ, ಹಾಗೆ ಮಾಡಲು ನಾವು ಬಿಡುವುದಿಲ್ಲ. ನಾವು ಸೇವೆ ಹಾಗೂ ರಾಷ್ಟ್ರ ಕಟ್ಟುವ ಕೆಲಸದ ಮೂಲಕ ಭ್ರಾತೃತ್ವ ಭಾವನೆ ಬೆಳೆಸಿ, ಸಮಾಜವನ್ನು ಗಟ್ಟಿಯಾಗಿ ಕಟ್ಟುವುದರ ಮೂಲಕ ಸರ್ವಜನಾಂಗದ ಶಾಂತಿಯ ತೋಟ ನಿರ್ಮಾಣ ಮಾಡಲು ದುಡಿಯಬೇಕು.
>
> – **ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**





## ದತ್ತಿ ಉಪನ್ಯಾಸ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಗದಗ ಮತ್ತು ತಾಲೂಕಾ ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಜುಲೈ 13ರಂದು ಸಂಜೆ 4.30 ಗಂಟೆಗೆ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯ, ಶ್ರೀ ತೋಂಟದಾರ್ಯ ಮಠದ ಆವರಣ ಗದಗ ಇಲ್ಲಿ ವಚನ ಸಂಶೋಧನೆ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ 145ನೇ ಜಯಂತಿ ಹಾಗೂ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ ತಿ.ಅಸುಂಡಿ, ವಹಿಸಿಕೊಳ್ಳಲಿರುವರು. ನಿವೃತ್ತ ಪ್ರಾಚಾರ್ಯ ಪ್ರೊ. ಎನ್.ಎಂ. ಪವಾಡಿಗೌಡ್ರ 'ಬಸವಾದಿ ಶಿವಶರಣರ ಸಾಹಿತ್ಯ ಪ್ರಸಾರ, ಮುದ್ರಣ ಸೇವೆ' ಎಂಬ ವಿಷಯ ಕುರಿತು ಉಪನ್ಯಾಸ ಮಾಡುವರು. ಅತಿಥಿಗಳಾಗಿ ಶರಣ ವಿ.ಕೆ. ಕರೇಗೌಡ್ರ, ಜಯಶ್ರೀ ಬಿ.ಪಟ್ಟಣಶೆಟ್ಟಿ ಆಗಮಿಸುವರು.

ಬಸವರಾಜ ಅಯ್ಯಪ್ಪ ಅಂಗಡಿ ಇವರ ಸ್ಮರಣಾರ್ಥ ಸುರೇಶ ಬಿ.ಅಂಗಡಿ ಹಾಗೂ ಸಹೋದರರು, ಮಾರುತಿ ಬುಕ್ ಸೆಂಟರ್ ಗದಗ ಇವರು ದತ್ತಿ ದಾನ ವಹಿಸಿಕೊಂಡಿರುವರು. ಶರಣ ಸಾಹಿತ್ಯ ಪರಿಷತ್ತು ಗದಗ ಮತ್ತು ಕದಳಿ ಮಹಿಳಾ ವೇದಿಕೆ ಗದಗ ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ತು ಕಾರ್ಯದರ್ಶಿ ಪ್ರೊ. ಯು.ಎಸ್. ಸಜ್ಜಶೆಟ್ಟರ ವಿನಂತಿಸಿದ್ದಾರೆ.

**ರೋಜಗಾರ ಮೇಳದಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿದ ಕೇಂದ್ರ ಸಚಿವ ಪ್ರಹ್ಲಾದ ಜೋಶಿ**

# ಅಭ್ಯರ್ಥಿಗಳು ಜನರೊಂದಿಗೆ ಸೌಜನ್ಯದಿಂದ ವರ್ತಿಸಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ರೋಜಗಾರ ಮೇಳದ ಮೂಲಕ 10 ವರ್ಷದಲ್ಲಿ 10 ಲಕ್ಷ ಉದ್ಯೋಗ ನೀಡುವ ಗುರಿಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹೊಂದಿದ್ದರು. ಅದರಂತೆ ರೋಜಗಾರ ಮೇಳದಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರವನ್ನು ವಿತರಣೆ ಮಾಡಲಾಗುತ್ತಿದೆ. ಇಪಿಎಫ್‌ಒನಲ್ಲಿ 23.73 ಕೋಟಿ ಹೊಸ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

> ಸರ್ಕಾರಿ ಕಚೇರಿಗಳು, ಸಂಸ್ಥೆಗಳು ಸೇರಿದಂತೆ ವಿವಿಧ ವಲಯಗಳಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ರೋಜಗಾರ್ ಮೇಳ ಕಾರ್ಯಕ್ರಮಗಳ ಮೂಲಕ ವಿತರಿಸಲಾಗುತ್ತಿದೆ. ಅದರಂತೆ ಸುಮಾರು 7.72 ಲಕ್ಷ ಉದ್ಯೋಗ ಪತ್ರಗಳನ್ನು ಅಭ್ಯರ್ಥಿಗಳಿಗೆ ನೀಡಲಾಗಿದೆ ಎಂದು ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು.



ಶನಿವಾರ ಕೇಶ್ವಾಪುರದ ಆಫೀಸರ್ಸ್ ಕ್ಲಬ್‌ನಲ್ಲಿ ನೈರುತ್ಯ ರೈಲ್ವೆ ಸಹಯೋಗದಲ್ಲಿ ಆಯೋಜಿಸಿದ್ದ ರೋಜಗಾರ್ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ 10 ವರ್ಷದಲ್ಲಿ ಸುಮಾರು 40 ಸಾವಿರ ಕಿ.ಮೀ. ರೈಲ್ವೆ ವಿದ್ಯುದೀಕರಣ ಮಾಡಲಾಗಿದೆ. 10 ವರ್ಷಗಳ ಹಿಂದೆ ಸುಮಾರು 23 ಸಾವಿರ ಕಿ.ಮೀ. ವಿದ್ಯುದೀಕರಣ ಮಾಡಲಾಗಿತ್ತು. ದೇಶದ ಸುಮಾರು 80 ಕೋಟಿ ಜನರಿಗೆ ಉಚಿತ ಪಡಿತರವನ್ನು ವಿತರಿಸಲಾಗುತ್ತಿದೆ. ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸಲಾಗಿದೆ. ರಾಷ್ಟ್ರದಲ್ಲಿ ಮೂಲಸೌಕರ್ಯ ಸುಧಾರಣೆಯಾಗಿದೆ. ಮಹಿಳೆಯರು ಸಹ ಉದ್ಯೋಗ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಭಾರತೀಯ ವಾಯು ಸೇನೆಯಲ್ಲಿ ಮಹಿಳಾ ಪೈಲಟ್‌ಗಳು ವಿಮಾನವನ್ನು ಚಲಾಯಿಸುತ್ತಿದ್ದಾರೆ. ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳು ಜನರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಅವರು ಹಾರೈಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಕಾರ್ಯಕ್ರಮದಲ್ಲಿ ನೈರುತ್ಯ ರೈಲ್ವೆ ವಲಯದ ಪ್ರಧಾನ ವ್ಯವಸ್ಥಾಪಕ ಮುಖಿಲ್ ಶರಣ ಮಾಥುರ್, ಡಿಆರ್‌ಎಂ ಬೀಲಾ ಮೀನಾ, ಪಿಸಿಪಿಓ ಸೂರ್ಯ ಪ್ರಕಾಶ ಸೇರಿದಂತೆ ರೈಲ್ವೆ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ಲೋಕ ಆದಾಲತ್‌ನಲ್ಲಿ 1474 ಪ್ರಕರಣಗಳ ಇತ್ಯರ್ಥ



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಪಟ್ಟಣದ ನ್ಯಾಯಾಲಯದಲ್ಲಿ ಶನಿವಾರ ನಡೆದ ರಾಷ್ಟ್ರೀಯ ಲೋಕ ಆದಾಲತ್‌ನಲ್ಲಿ ಒಟ್ಟು 1830 ಪ್ರಕರಣಗಳ ಪೈಕಿ 1474 ಪ್ರಕರಣಗಳನ್ನು ಉಭಯ ನ್ಯಾಯಾಧೀಶರಾದ ಆರ್. ಉಷಾರಾಣಿ ಮತ್ತು ಎಸ್.ಪಿ. ಮನುಶರ್ಮ ನೇತೃತ್ವದಲ್ಲಿ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು.

ರಸ್ತೆ ಅಪಘಾತ, ಚೆಕ್ ಬೌನ್ಸ್, ಬ್ಯಾಂಕ್ ಸಾಲ ವಸೂಲಿ, ಜಮೀನು ವಿವಾದ, ಕೌಟುಂಬಿಕ ದೌರ್ಜನ್ಯ, ಕ್ರಿಮಿನಲ್ ಪ್ರಕರಣ, ಮೋಟಾರು ವಾಹನ, ಸಹಕಾರಿ ಬ್ಯಾಂಕುಗಳು, ನಿವೇಶನ ಮಾರಾಟ ಸೇರಿದಂತೆ ಬಾಕಿ ಇದ್ದ ಇನ್ನಿತರ ಪ್ರಕರಣಗಳನ್ನು ಲೋಕ್ ಆದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು.

ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ಒಟ್ಟು 840 ಪ್ರಕರಣಗಳ ಪೈಕಿ 670 ಪ್ರಕಣಗಳನ್ನು ರಾಜೀ ಸಂಧಾನ ಮೂಲಕ ಇತ್ಯರ್ಥ ಪಡಿಸಿದರೆ, ಕೆಲವನ್ನು ಪರಿಹಾರದ ರೂಪದಲ್ಲಿ ಇತ್ಯರ್ಥಪಡಿಸಲಾಯಿತು. ಕಿರಿಯ ಸಿವಿಲ್ ನ್ಯಾಯಾಲಯದಲ್ಲಿ 990 ಪ್ರಕರಣಗಳ ಪೈಕಿ 804 ಪ್ರಕಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡರೆ ಇನ್ನು ಕೆಲವು ಪರಿಹಾರದ ರೂಪದಲ್ಲಿ ಇತ್ಯರ್ಥಗೊಂಡವು.

ವಕೀಲರ ಸಂಘದ ಅಧ್ಯಕ್ಷ ಟಿ. ವೆಂಕಟೇಶ್, ಉಪಾಧ್ಯಕ್ಷ ಮಂಜುನಾಥ್ ಎಸ್.ಬಾಗಳಿ, ಕಾರ್ಯದರ್ಶಿ ಎಂ. ಮಲ್ಲಪ್ಪ, ಕೆ. ಸಣ್ಣನಿಂಗನಗೌಡ, ಸರ್ಕಾರಿ ಅಭಿಯೋಜಕಿ ಮೀನಾಕ್ಷಿ ಎನ್, ನಿರ್ಮಲ, ಹಿರಿಯ ವಕೀಲರಾದ ಕೃಷ್ಣಮೂರ್ತಿ, ಮತ್ತಿಹಳ್ಳಿ ಅಜ್ಜಣ್ಣ, ರಾಮ್‌ಭಟ್, ಎಸ್. ರುದ್ರಮನಿ, ಬಿ. ಗೋಣಿಬಸಪ್ಪ, ಬಿ. ಹಾಲೇಶ್, ಕೆ.ಎಂ. ಚಂದ್ರಮೌಳಿ, ಆನಂದ ಬಂಡ್ರಿ, ಎಸ್.ಜಿ. ತಿಪ್ಪೇಸ್ವಾಮಿ,ಸೇರಿದಂತೆ ನ್ಯಾಯಾಲಯದ ಸಿಬ್ಬಂದಿಗಳಿದ್ದರು.

## ಬಿ.ಜಿ. ಅಣ್ಣಿಗೇರಿ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಬಿ.ಜಿ. ಅಣ್ಣಿಗೇರಿ ಗುರುಗಳ ನಿಸ್ವಾರ್ಥ ಸೇವೆ, ಪ್ರಾಮಾಣಿಕತೆಗಳನ್ನು ಇಂದಿನ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಗದಗ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಹೇಳಿದರು.

ಪ್ರತಿಷ್ಠಾನದ ವತಿಯಿಂದ ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯಲ್ಲಿ ಕಳೆದ ವರ್ಷ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಧಿಕ ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಶ್ರದ್ಧೆ ಬಹಳ ಮುಖ್ಯವಾಗಿದ್ದು, ಅಣ್ಣಿಗೇರಿ ಗುರುಗಳ ಮಾರ್ಗದರ್ಶನದಲ್ಲಿ ಸಾವಿರಾರು ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಂಡಿದ್ದಾರೆ. ಈ ದಿಸೆಯಲ್ಲಿ ಅವರ ಹೆಸರಿನಲ್ಲಿ ಪ್ರತಿಭಾ ಪ್ರತಿಷ್ಠಾನವನ್ನು ಸ್ಥಾಪಿಸಿ ಗದಗ ಗ್ರಾಮೀಣ ಹಾಗೂ ಶಹರದಲ್ಲಿರುವ ಸರಕಾರಿ ಶಾಲೆ ಹಾಗೂ ವಸತಿ ಶಾಲೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಗದು ಹಾಗೂ ಪಾರಿತೋಷಕವನ್ನು ನೀಡಿ ಗೌರವಿಸಲಾಗುತ್ತಿದೆ ಎಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಜಿ.ಬಿ. ಬಿಡನಾಳ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಮಯಕ್ಕೆ ಹೆಚ್ಚು ಮಹತ್ವನ್ನು ನೀಡಬೇಕು. ದೈರ್ಯದಿಂದ ಪ್ರತಿ ಸಮಸ್ಯೆಯನ್ನು ಪರಿಹರಿಸಿಕೊಳ್ಳಲು ಗುರುಗಳ ಮಾರ್ಗದರ್ಶನ ಪಡೆಯಬೇಕು ಎಂದರು.

ಪ್ರಥಮ ಸ್ಥಾನ ಪಡೆದ ಗಾಯತ್ರಿ ವಿಜಯಹಾಳ, ರೋಹಿಣಿ ಮಾಡಲಗೇರಿ, ಶಿವಲೀಲಾ ಅಬ್ಬಿಗೇರಿ, ದೃಷ್ಟಿ ರಾಜಕುಮಾರಿ ಮುಸ್ಕಿನಭಾವಿ, ವಿಜಯಲಕ್ಷ್ಮೀ ರಮೇಶ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ ಅಧ್ಯಕ್ಷತೆ ವಹಿಸಿದ್ದರು. ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತೇಶ ಕುಂಬಾರ, ಸುಭಾಸಚಂದ್ರ ಬೆಟದೂರು, ಶಿವಣ್ಣ ಕತ್ತಿ, ಭಾರತಿ ಪಾಟೀಲ, ನೇಹಾ ಸುಧಾರಾಣಿ ಉಪಸ್ಥಿತರಿದ್ದರು. ಎ.ಎಸ್. ಕಳಸದ ಸ್ವಾಗತಿಸಿದರು. ವೈ. ವೈ. ಬೆಟಗೇರಿ ನಿರೂಪಿಸಿದರು. ಶಾರದಾ ಮುಂಡೇವಾಡೆ ವಂದಿಸಿದರು.

## ಸಂಪಾದಕೀಯ

# ಜಿಎಸ್‌ಟಿ ಪರಿಷ್ಕರಣೆ ಜೊತೆ ಪೆಟ್ರೋಲ್ ಜಿಎಸ್‌ಟಿ ವ್ಯಾಪ್ತಿಗೆ ಸೇರಲಿ

ಅಂದಾಜು 8 ವರ್ಷಗಳ ನಂತರ ಜಿಎಸ್‌ಟಿ ಪರಿಷ್ಕರಣೆಗೆ ಸರಕಾರ ಮುಂದಾಗಿದೆ. ಅದರ ಜೊತೆಗೆ

ಪೆಟ್ರೋಲ್ ಅನ್ನು ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯಾಪ್ತಿಗೆ ತರುವ ಚರ್ಚೆ ದಶಕಗಳಿಂದಲೂ ನಡೆಯುತ್ತಿದೆ.

ಪ್ರಸ್ತುತ ಪೆಟ್ರೋಲ್ ಮತ್ತು ಡೀಸೆಲ್ ರಾಜ್ಯದ ವ್ಯಾಟ್ (ಗಿಂಖಿ) ಮತ್ತು ಕೇಂದ್ರದ ಅಬಕಾರಿ ಸುಂಕದ ಅಡಿಯಲ್ಲಿರುವುದರಿಂದ, ಪ್ರತಿ ರಾಜ್ಯದಲ್ಲಿಯೂ ಬೆಲೆಗಳು ವಿಭಿನ್ನವಾಗಿವೆ. ಇದು ಗ್ರಾಹಕರಿಗೆ ಗೊಂದಲ ಮೂಡಿಸುವುದಲ್ಲದೆ, ವ್ಯವಹಾರಗಳಿಗೂ ಅಡಚಣೆಯಾಗಿದೆ.

ಪೆಟ್ರೋಲ್ ಅನ್ನು ಜಿಎಸ್‌ಟಿ ವ್ಯಾಪ್ತಿಗೆ ತಂದರೆ, ದೇಶಾದ್ಯಂತ ಇಂಧನ ಬೆಲೆಗಳಲ್ಲಿ ಏಕರೂಪತೆ ಬರಲಿದೆ. ಇದರಿಂದ ಗ್ರಾಹಕರಿಗೆ ಕಡಿಮೆ ಬೆಲೆಯಲ್ಲಿ ಪೆಟ್ರೋಲ್ ಲಭ್ಯವಾಗುವ ಸಾಧ್ಯತೆ ಇದೆ. ಅಲ್ಲದೆ, ವ್ಯಾಟ್ ಮತ್ತು ಅಬಕಾರಿ ಸುಂಕದ ಮೇಲಿನ ಕ್ಯಾಸ್ಕೇಡಿಂಗ್ ಎಫೆಕ್ಟ್ (ತೆರಿಗೆಯ ಮೇಲೆ ತೆರಿಗೆ) ತಪ್ಪುತ್ತದೆ, ಇದು ಲಾಜಿಸ್ಟಿಕ್ಸ್ ವೆಚ್ಚಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಆದರೆ, ಈ ಕ್ರಮಕ್ಕೆ ರಾಜ್ಯಗಳಿಂದ ತೀವ್ರ ವಿರೋಧವಿದೆ.

ಪೆಟ್ರೋಲ್ ಮತ್ತು ಡೀಸೆಲ್ ರಾಜ್ಯಗಳಿಗೆ ಪ್ರಮುಖ ಆದಾಯದ ಮೂಲವಾಗಿದೆ. ಜಿಎಸ್‌ಟಿ ವ್ಯಾಪ್ತಿಗೆ ಬಂದರೆ, ತಮ್ಮ ಆದಾಯದಲ್ಲಿ ದೊಡ್ಡ ಕುಸಿತವಾಗಬಹುದು ಎಂಬ ಆತಂಕ ರಾಜ್ಯಗಳಿಗಿದೆ. ಈ ಕಾರಣಕ್ಕಾಗಿಯೇ ಜಿಎಸ್‌ಟಿ ಕೌನ್ಸಿಲ್ ಸಭೆಗಳಲ್ಲಿ ಈ ವಿಷಯಕ್ಕೆ ಒಮ್ಮತ ದೊರೆತಿಲ್ಲ.

ಕೇಂದ್ರ ಸರ್ಕಾರವು ಪೆಟ್ರೋಲ್ ಅನ್ನು ಜಿಎಸ್‌ಟಿ ವ್ಯಾಪ್ತಿಗೆ ತರಲು ಸಿದ್ಧವಿದ್ದರೂ, ರಾಜ್ಯಗಳ ಸಹಮತವಿಲ್ಲದೆ ಇದು ಸಾಧ್ಯವಿಲ್ಲ.

ಇಂಧನ ಬೆಲೆಗಳ ಏರಿಳಿತ ಜನಸಾಮಾನ್ಯರ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ, ರಾಜಕೀಯ ಪಕ್ಷಗಳು ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಸೇರಿ, ದೇಶದ ಆರ್ಥಿಕತೆಗೆ ಅನುಕೂಲಕರವಾದ ಮತ್ತು ಗ್ರಾಹಕರ ಮೇಲಿನ ಹೊರೆಯನ್ನು ಕಡಿಮೆ ಮಾಡುವ ಒಂದು ನಿರ್ಧಾರಕ್ಕೆ ಬರುವುದು ಅತ್ಯಗತ್ಯ. ಇದು ಸುಸ್ಥಿರ ಆರ್ಥಿಕತೆಗೆ ದಾರಿ ಮಾಡಿಕೊಡುತ್ತದೆ.

**ಪ್ರೊ. ರಮೇಶ ಉಳ್ಳಾಗಡ್ಡಿ ಗೌರವ ಡಾಕ್ಟರೇಟ್ ಪದವಿ ಪುರಸ್ಕೃತರಾದ ನಿಮಿತ್ತ ಲೇಖನ**

# ಬಡತನದಲ್ಲಿ ಅರಳಿದ ಸಾಧಕ

ಕಿತ್ತು ತಿನ್ನುವ ಬಡತನ. ಗಾರೆ ಕೆಲಸಕ್ಕೆ ಹೋಗದಿದ್ದರೆ ಬದುಕು ನೂಕುವುದೇ ಕಷ್ಟ. ಅಂತಹ ದಿನಮಾನಗಳಲ್ಲಿ ಓದು ಮುಂದುವರಿಸಲು ಹೆಣಗಾಡುತ್ತಿರುವ ದೃಶ್ಯ ಕಣ್ಮುಂದೆ ಕಟ್ಟಿದಂತಿದೆ. ಕಾಲೇಜು ಶುಲ್ಕ ಕಟ್ಟಲು ಕಲ್ಲುಗಳನ್ನು ಹೊರಬೇಕಾದ ಅನಿವಾರ್ಯತೆ ಇತ್ತು. ಕಲ್ಲು-ಮಣ್ಣು ಹೊತ್ತು, ಬೇರೆಯವರ ಮನೆಗೆ ಸುಣ್ಣ ಬಳಿದು ಕಷ್ಟದಲ್ಲಿಯೇ ವಿದ್ಯಾಭ್ಯಾಸ ಪೂರೈಸಿಕೊಂಡು ತನ್ನದೆಯಾದ ಸಂಸ್ಥೆಯನ್ನು ಹುಟ್ಟು ಹಾಕಿದ ಸಹೃದಯಿ, ಸಂಘಟನಾ ಚತುರ, ಅಂತಃಕರಣದ ಸಿರಿ ರಮೇಶ ಉಳ್ಳಾಗಡ್ಡಿ.

' ಇರುವ ಕೆಲಸವ ಮಾಡು ಕಿರಿದೆನದೆ ಮನವಿಟ್ಟು ।

ದೊರೆತದು ಹಸಾದವೆಂದುಣ್ಣು ಗೊಣಗಿಡದೆ।

ಧರಿಸು ಲೋಕದ ಭರವ ಪರಮಾರ್ಥವನು ಬಿಡದೆ।

ಹೊರಡು ಕರೆ ಬರಲ್ ಅಳದೆ। ಮಂಕುತಿಮ್ಮ'

ಎನ್ನುವ ಡಿ.ವಿ.ಜಿಯವರ ಮಂಕುತಿಮ್ಮನ ಕಗ್ಗದಂತೆ ಸರ್ವ ಕೆಲಸಗಳನ್ನು ಅಲ್ಪವಾಗಿ ಕಾಣದೆ ಬದುಕಿನಲ್ಲಿ ಬಂದದ್ದೆಲ್ಲವನ್ನೂ ಶಿವನ ಪ್ರಸಾದವೆಂದು ಸವಿದು, ಪಾರಮಾರ್ಥದೆಡೆಗೆ ಹೊರಟು ನಿಂತವರು, ಅಂಜದೆ, ಅಳುಕದೆ, ಕುಗ್ಗದೆ, ಬಗ್ಗದೆ ಬಾಳಿಗೆ ಬಾಗಿ, ಬಡತನಕ್ಕೆ ಎದುರಾಗಿ ನಿಂತು, ಸಮರ್ಥ ಬದುಕನ್ನು ನಿರ್ಮಿಸಿಕೊಳ್ಳಲು, ಜ್ಞಾನದ ರವಿಕೆ ಉಡಲು, ಸಾವಿರ ಕಷ್ಟದ ಕೆಲಸಗಳನ್ನು ಇಷ್ಟದಿಂದ ಮಾಡಿ, ಓದು ಮುಗಿಸಿದ ಛಲಗಾರ, ಸಂಯಮಿ, ಸ್ನೇಹದ ಝರಿ, ಅಂತಃಕರಣದ ಗಣಿ ಡಾ.ರಮೇಶ ಉಳ್ಳಾಗಡ್ಡಿಯವರು.

ಇವರು ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕು ಕರಮುಡಿ ಗ್ರಾಮದ ಕೃಷಿ ಹಿನ್ನೆಲೆಯ ಉಳ್ಳಾಗಡ್ಡಿ ಮನೆತನದ ಮಲ್ಲೇಶಪ್ಪ ಮತ್ತು ನಾಗಮ್ಮರವರ ಸುಪುತ್ರರಾಗಿ ಜನಿಸಿ, ಪ್ರಾಥಮಿಕ ಶಿಕ್ಷಣವನ್ನು ಧಾರವಾಡದ ಸರ್ಕಾರಿ ಶಾಲೆಯಲ್ಲಿ ಪೂರೈಸಿಕೊಂಡರು. ಪ್ರೌಢಶಾಲೆಯನ್ನು ಗದಗದಲ್ಲಿ ಉತ್ತಮ ಫಲಿತಾಂಶದೊಂದಿಗೆ ತೇರ್ಗಡೆಯಾಗಿ, ಗದಗದ ಕೆ.ವಿಎಸ್.ಆರ್ ಕಾಲೇಜಿನಲ್ಲಿ ಪದವಿಪೂರ್ವ ಮತ್ತು ಪದವಿ ಶಿಕ್ಷಣ ಪಡೆದು, 1999ರಲ್ಲಿ ಹರಪನಹಳ್ಳಿಯ ಟಿ.ಎಂ.ಇ.ಎಸ್ ಕಾಲೇಜಿನಲ್ಲಿ ಬಿ.ಇಡಿ ಪದವೀಧರರಾಗಿ, ನಂತರ ಕರ್ನಾಟಕ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದರು.

ಬಾಲ್ಯದಲ್ಲಿಯೇ ಪ್ರತಿಭಾವಂತ ವಿದ್ಯಾರ್ಥಿಯಾಗಿ ಎಲ್ಲ ಗುರುಗಳ ಪ್ರೀತಿಗೆ ಪಾತ್ರನಾಗಿ ಬೆಳೆದ ರಮೇಶರು, ಬಡತನಕ್ಕೆ ಹಳಬರಾದರು, ಕಾಯಿಪಲ್ಲೆ ಮಾರಿ ತಮ್ಮ ಶಾಲಾ ಶುಲ್ಕ ಕಟ್ಟಿ ಓದಿ ದಿಟ್ಟತನದಿಂದ ಹೆಜ್ಜೆ ಹಾಕಿದರು. ಯಾವ ಮುಜುಗರ ಪಡದೆ ದನ ಕಾಯ್ದರು. ಬೇರೆಯವರ ಮನೆಗೆ ಬಣ್ಣ ಬಳಿದು ಬದುಕನ್ನು ಬಣ್ಣವಾಗಿಸಿಕೊಂಡರು. ಬಾರ್ ಬೆಂಡಿಂಗ್ ಕೆಲಸಕ್ಕೆ ತೆರಳಿ, ನೂರಾರು



ತೊಂದರೆಗಳನ್ನು ಪರಿಹರಿಸಿಕೊಂಡು, ಅನೇಕ ಫ್ಯಾಕ್ಟರಿಗಳಲ್ಲಿ ಕೆಲಸ ಮಾಡುತ್ತಾ ಜ್ಞಾನಗಂಗೆಯನ್ನು ಆರೋಹಿಸಿಕೊಂಡ ಆದರ್ಶ ಗೆಳೆಯ, ಪ್ರೀತಿಯ ಅಳಿಯ ರಮೇಶ ಉಳ್ಳಾಗಡ್ಡಿಯವರು.

1999ರಿಂದ 2010ರವರೆಗೆ ಗದಗದ ಬೇರೆ ಬೇರೆ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸಹಾಯಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಾ ಅಲ್ಪ ಸಂಬಳದಲ್ಲಿಯೇ ತೃಪ್ತಿಯಿಂದ ವಿದ್ಯಾರ್ಥಿಗಳಿಗೆ ಉತ್ತಮ ಬೋಧನೆಯನ್ನು ಮಾಡಿ, ಅನೇಕ ಸಂಪನ್ಮೂಲ ವ್ಯಕ್ತಿಗಳನ್ನು ನಾಡಿಗೆ ನೀಡಿದ ಹೆಗ್ಗಳಿಕೆ ರಮೇಶರದು. ಇವರಲ್ಲಿ ಕಲಿತು ಸಾಧನೆಗೈದ ಸಾಕಷ್ಟು ವಿದ್ಯಾರ್ಥಿಗಳು ಇಂದಿಗೂ ಇವರ ಸಂಪರ್ಕದಲ್ಲಿದ್ದು ಮಾರ್ಗದರ್ಶನ ಪಡೆಯುತ್ತಿರುವುದು ಶ್ಲಾಘನೀಯ. ವಿದ್ಯಾರ್ಥಿಗಳ ಬಾಳಿನ ಬೆಳಕಾಗಿ, ಅವರ ಉಜ್ವಲ ಬದುಕಿಗೆ ಮಂದಾರದ ದೀವಿಗೆಯಾಗಿ, ಅಚ್ಚಳಿಯದೇ ಅವರ ಮನದಲ್ಲಿ ನೆಲೆಯೂರಿದವರು. ನಾಯಕತ್ವ, ಸೇವಾ ಮನೋಭಾವ ವಿದ್ಯಾರ್ಥಿಗಳಿಗೆ ಬಿತ್ತುತ್ತಾ ಗದಗದಲ್ಲಿ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಕಡಿಮೆ ಶುಲ್ಕದಲ್ಲಿ ತರಗತಿಗಳನ್ನು ನಡೆಸಿ, ಉತ್ತಮ ಫಲಿತಾಂಶಕ್ಕೆ ಪ್ರೇರಣೆ ನೀಡಿದವರು.

2010ರಲ್ಲಿ ಡಾ. ರಮೇಶರು ಖಾಸಗಿ ಸಂಸ್ಥೆಯಲ್ಲಿ ದುಡಿಯುವ ಬದಲು ಸ್ವಂತ ಶಿಕ್ಷಣ ಸಂಸ್ಥೆ ಸ್ಥಾಪಿಸುವ ಛಲ ಮೂಡಿಸಿಕೊಂಡು ವಿದ್ಯಾಕಾಶಿ ಧಾರವಾಡಕ್ಕೆ ತೆರಳಿದರು. ಕ್ರಿಯೇಟಿವ್ ಅಕಾಡೆಮಿ ಸ್ಥಾಪಿಸಿ, ಬೇಸಿಗೆ ಮತ್ತು ರೆಗ್ಯೂಲರ್ ತರಗತಿಗಳನ್ನು ನಡೆಸಿದರು. ಕರ್ನಾಟಕದ ನಾನಾ ಭಾಗದಿಂದ ಸಾವಿರಾರು ವಿದ್ಯಾರ್ಥಿಗಳು ಪ್ರವೇಶ ಪಡೆದು ಉತ್ತಮ ಜ್ಞಾನಾರ್ಜನೆಗೆ ದಾರಿ ಮಾಡಿದರು. ಹಿಂದುಳಿದ ಪ್ರದೇಶಗಳಾದ ಕೊಪ್ಪಳ, ಸಿಂಧನೂರು, ಕಲಬುರ್ಗಿ, ಬಳ್ಳಾರಿ, ರಾಯಚೂರು, ಬಾಗಲಕೋಟೆ ಹೀಗೆ ಅನೇಕ ಕಡೆಯಿಂದ ಬಂದ ವಿದ್ಯಾರ್ಥಿಗಳಿಗೆ ಉತ್ತಮ ಬೋಧಕರಿಂದ ತರಗತಿಗಳನ್ನು ಕೊಡಿಸಿ, ಊಟ, ಉಪಹಾರ, ವಸತಿ ಮುಂತಾದ ಸಕಲ ಸೌಲಭ್ಯಗಳನ್ನು ಒದಗಿಸಿ, ಅವರ ಜ್ಞಾನಾರ್ಜನೆಗೆ ಪೂರಕ ವಾತಾವರಣವನ್ನು ನಿರ್ಮಿಸುವಲ್ಲಿ ಕಾಳಜಿಯನ್ನು ತೆ-ೂರಿದರು. ನವೋದಯ ಕೋಚಿಂಗ್ ಸೆಂಟರ್‌ನ್ನು ಸ್ಥಾಪಿಸಿ, ಪ್ರತಿ ವರ್ಷ ವಸತಿ ಶಾಲೆಗಳಾದ ಎಂ.ಡಿ.ಆರ್.ಎಸ್, ಆದರ್ಶ, ರಾಣಿ ಚನ್ನಮ್ಮ, ಅಳಿಕೆ, ಸೈನಿಕ ಶಾಲೆಗಳಿಗೆ ಶ್ರೇಷ್ಠ ತರಬೇತಿ ನೀಡಿ ಸಾಕಷ್ಟು ವಿದ್ಯಾರ್ಥಿಗಳು ಆಯ್ಕೆಯಾಗಿ ಅಕಾಡೆಮಿಯ ಕೀರ್ತಿಯನ್ನು ಹೆಚ್ಚಿಸಿದ್ದಲ್ಲದೆ ಧಾರವಾಡದಲ್ಲಿ ಶ್ರೇಷ್ಠ ತರಬೇತಿ ಕೇಂದ್ರವಾಗಿ ಹೊರಹೊಮ್ಮಿದೆ.

ಶಿಕ್ಷಣ ಕ್ಷೇತ್ರದಲ್ಲಿ ಇವರ ಸೇವಾ ಹಿರಿತನವನ್ನು ಕಂಡು ಏಶಿಯಾ ಇಂಟರ್‌ನ್ಯಾಷನಲ್ ಕಲ್ಚರಲ್ ರಿಸರ್ಚ್ ಯುನಿವರ್ಸಿಟಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ಜರುಗಿದ ಸಮಾರಂಭದಲ್ಲಿ ಗೌರವ ಡಾ-ಕ್ಟರೇಟ್ ಪದವಿ ಪ್ರದಾನ ಮಾಡಿ ಗೌರವಿಸಲಾಯಿತು. ಬಡತನದಲ್ಲಿ ಅರಳಿ, ಜೀವನ ಸಾರ್ಥಕ ಮಾಡಿಕೊಂಡ ರಮೇಶರ ಜೀವನ ನಿರಾಶೆಗೊಂಡ ಬದುಕುಗಳಿಗೆ ಆಶಾದಾಯಕದ ಸಿಂಚನ. ನೀರವ ಜೀವನಕ್ಕೆ ಅನುಕರಣೀಯ, ಸೋತವರಿಗೆ ಸವಾಲಿನ ಶಕ್ತಿ, ಚಿಂತೆಯುಳ್ಳವರಿಗೆ ಚೈತನ್ಯದ ಚಿಲುಮೆ, ನಿರರ್ಥಕ ಜೀವನಕ್ಕೆ ಅರ್ಥ ಕಲ್ಪಿಸಿಕೊಡುವ ಸುಮಧುರ ಸವಿಗಾನ ಎಂಬುವುದರಲ್ಲಿ ಯಾವುದೇ ಅತಿಶಯೋಕ್ತಿಯಿಲ್ಲ. ಇವರ ಪ್ರತಿಯೊಂದು ಪ್ರಾಮಾಣಿಕ ಸೇವಾ ಕೈಂಕಯಕ್ಕೆ ಬೊಗೆಸೆ ತುಂಬಾ ಅಭಿನಂದನೆಗಳು, ಹೀಗೆ ಅನೇಕ ಗೌರವ ಪ್ರಶಸ್ತಿಗಳು, ಸನ್ಮಾನಗಳು ಇವರ ಮುಡಿಗೇರಿ ರಾರಾಜಿಸಲೆಂಬ ಶುಭಾಶಯ ನಮ್ಮದು.

**– ಪ್ರೊ. ಹೆಚ್.ಎಸ್. ದಳವಾಯಿ.**
**ಕನ್ನಡ ಉಪನ್ಯಾಸಕರು, ಗದಗ.**

# ಇನ್ನರ್‌ವೀಲ್ ಕ್ಲಬ್‌ನಿಂದ ಗುರುಪೂರ್ಣಿಮೆ ಆಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬ ಜೀವಿಯ ಅವಿಭಾಜ್ಯ ಅಂಗವಾದ ಗುರುವಿಗೆ ಕೃತಜ್ಞತೆಯನ್ನು ತೋರಿಸಲೆಂದು ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿಯ ವತಿಯಿಂದ ಗುರುಪೂರ್ಣಿಮೆಯ ಅಂಗವಾಗಿ ಗುರುವಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಪಂಚಾಕ್ಷರಿ ಗವಾಯಿಗಳವರ ವಸತಿಯುತ ಶಾಲೆಯ ಮುಖ್ಯೋಪಾಧ್ಯಾಯರಾದ ಕೆ.ಬಿ. ಹಿರೇಮಠರನ್ನು ಸನ್ಮಾನಿಸಲಾಯಿತು. ಇನ್ನರ್ ವೀಲ್ ಕ್ಲಬ್‌ನ ಅಧ್ಯಕ್ಷರಾದ ಅಶ್ವಿನಿ ಜಗತಾಪ ವಿದ್ಯಾರ್ಥಿ ಜೀವನದಲ್ಲಿ ಗುರುವಿನ ಮಹತ್ವವನ್ನು ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಯಶ್ರೀ ಉಗಲಾಟ, ಪುಷ್ಪಾ ಭಂಡಾರಿ, ಪೂಜಾ ಭೂಮಾ, ಮೀನಾಕ್ಷಿ ಕೊರವಣ್ಣವರ, ಶಿಲ್ಪಾ ಅಕ್ಕಿ, ತನುಜಾ ಗೋವಿಂದಪ್ಪನವರ, ಸುಮಾ ಪಾಟೀಲ, ಸಾಗರಿಕಾ ಅಕ್ಕಿ ಹಾಗೂ ಪವಿತ್ರಾ ಬಿರಾದರ ಉಪಸ್ಥಿತರಿದ್ದರು.

# ಗ್ರಾಮದಲ್ಲಿ ಕುಡಿಯುವ ನೀರಿನ ಪೂರೈಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ತಿಮ್ಮಾಪೂರ ಗ್ರಾಮದಲ್ಲಿ 5 ಸಾವಿರ ಜನಸಂಖ್ಯೆಯಿದ್ದು, ಡಿಬಿಓಟಿ ನೀರು ಕುಡಿಯಲು ಬಳಸಲಾಗುತ್ತಿದೆ. ಸದರಿ ಗ್ರಾಮಕ್ಕೆ ಹರ್ಲಾಪುರ ಗ್ರಾಮದ ಮಹಡಿ ಗುಡ್ಡದ ಹತ್ತಿರ ಒಂದು ಬೋರ್‌ವೆಲ್ ಇದ್ದು, ಬೋರವೆಲ್‌ನಿಂದ ಈ ಹಿಂದೆ ಗ್ರಾಮಕ್ಕೆ ನೀರು ಪೂರೈಕೆಯಾಗುತ್ತಿತ್ತು. ಸದ್ಯ ಪೈಪ್‌ಲೈನ್ ದುರಸ್ತಿಯಿಂದ ಅದೂ ಸಹ ನಿಂತು ಹೋಗಿದೆ.

ಜುಲೈ ಮೊದಲನೇ ವಾರದಲ್ಲಿ ಡಿಬಿಓಟಿ ನೀರು ಪೂರೈಸುವ ಕೇಂದ್ರ ಸ್ಥಳದಲ್ಲಿ ವಿದ್ಯುತ್ ಪೂರೈಕೆಯ ಸಮಸ್ಯೆಯಿಂದ ಗ್ರಾಮಕ್ಕೆ ನೀರು ಪೂರೈಕೆಯಾಗುವಲ್ಲಿ ಸಮಸ್ಯೆಯಾಗಿದೆ. ಈ ಕುರಿತು ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರೊಂದಿಗೆ ಸಮಾಲೋಚಿಸಿ ಜುಲೈ 6ರಿಂದ ಸರಾಸರಿ 2.40 ಲಕ್ಷ ಲೀಟರ್ ನೀರು ಪೂರೈಕೆ ಆಗುವಂತೆ ಕ್ರಮಕೈಗೊಳ್ಳಲಾಗಿದೆ.

ತಿಮ್ಮಾಪೂರ ಗ್ರಾಮದಲ್ಲಿ ಕುಡಿಯುವ ನೀರಿನ ವಿತರಣೆ ಮಾಡುವಾಗ ಕೆಲವೊಂದು ಕುಟುಂಬದವರು ನಳಕ್ಕೆ ನೇರವಾಗಿ ಮೋಟರ್ ಮೂಲಕ ನೀರನ್ನು ಪಂಪ್ ಮಾಡುವುದರಿಂದ ಎತ್ತರದ ಭಾಗದ ಮನೆಗಳಿಗೆ ನೀರು ಪೂರೈಕೆಯಲ್ಲಿ ಸಮಸ್ಯೆ ಆಗುತ್ತಿದ್ದು, ಸದರಿ ಕುಟುಂಬಗಳಿಗೆ ಗ್ರಾಮ ಪಂಚಾಯಿತಿ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಮನವೊಲಿಸಿ ಮೋಟಾರ್ ಹಚ್ಚದಂತೆ ಕ್ರಮ ಕೈಗೊಳ್ಳಲಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಚರ್ಚಿಸಿ, ಜಿಲ್ಲಾ ಕುಡಿಯುವ ನೀರಿನ ಖಿಂಖಿಎ ಈಔಖಅಇ ಅನುದಾನದಲ್ಲಿ ಹರ್ಲಾಪೂರ ಗ್ರಾಮದ ಹತ್ತಿರ ಇರುವ ಮಹಡಿ ಗುಡ್ಡದ ಬೋರ್‌ವೆಲ್‌ನ ಪೈಪ್‌ಲೈನನ್ನು ದುರಸ್ತಿಪಡಿಸಿ ಕುಡಿಯವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಬಗೆಹರಿಸಲಾಗುವುದೆಂದು ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.


# ಪ್ರತಿಭಾ ಪುರಸ್ಕಾರ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಕೊಪ್ಪಳದ ಹಿರಿಯ ನ್ಯಾಯವಾದಿ ದಿ. ಕೆ.ಎಸ್. ಕುಲಕರ್ಣಿ, ಗದುಗಿನ ಹಿರಿಯ ಸಾಮಾಜಿಕ ಕಾರ್ಯಕರ್ತ ದಿ. ರಾಮರಾವ ನಾರಪ್ಪನವರ ಕುಟುಂಬದ ಕೃಷ್ಣ ಸೇವಾ ಟ್ರಸ್ಟ್ ಬ್ರಾಹ್ಮಣ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಜುಲೈ 13ರಂದು ಪ್ರತಿಭಾ ಪುರಸ್ಕಾರ ಹಮ್ಮಿಕೊಂಡಿದೆ. ಇಲ್ಲಿಯ ವಿದ್ಯಾದಾನ ಸಮಿತಿಯ ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆಯುವ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಉದ್ಘಾಟಿಸುವರು. ವಿದ್ಯಾದಾನ ಸಮಿತಿಯ ಕಾರ್ಯದರ್ಶಿ, ಬ್ರಾಹ್ಮಣ ಸಮಾಜದ ತಾಲೂಕಾಧ್ಯಕ್ಷ ಶ್ರೀನಿವಾಸ ಹುಯಿಲಗೋಳ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಬ್ರಾಹ್ಮಣ ಸಮಾಜದ ಜಿಲ್ಲಾಧ್ಯಕ್ಷ ವೆಂಕಟೇಶ ಕುಲಕರ್ಣಿ, ಸಾಹಿತಿ ಪ್ರೊ. ಅನಿಲ ವೈದ್ಯ, ಕೃಷ್ಣ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಶ್ರೀನಿವಾಸ ನಾರಪ್ಪನವರ ಮುಂತಾದವರು ಪಾಲ್ಗೊಳ್ಳಲಿದ್ದಾರೆ. ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಿದವರು, ಬ್ರಾಹ್ಮಣ ಸಮಾಜ ಬಾಂಧವರು ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಟ್ರಸ್ಟ್ ಕಾರ್ಯದರ್ಶಿ ಡಾ. ಸಂಜೀವ ನಾರಪ್ಪನವರ ಕೋರಿದ್ದಾರೆ.

# 'ಶರಣ ಸಂಗಮ' ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜುಲೈ 13ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1654ನೇ ಶರಣ ಸಂಗಮದಲ್ಲಿ ಶರಣ ಹಡಪದ ಅಪ್ಪಣ್ಣನವರು ಮತ್ತು ಶರಣೆ ಹಡಪದ ಲಿಂಗಮ್ಮನವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ, ವಹಿಸುವರು. ಶರಣೆ ಮಂಜುಳಾ ಹಾಸಿಲಕರ ಉಪನ್ಯಾಸ ಮಾಡುವರು. ಶರಣೆ ಟಿ.ವಾಯ್. ಹಡಪದ ಅತಿಥಿಗಳಾಗಿ ಆಗಮಿಸುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

# ವಾಹನಗಳ ತಪಾಸಣೆ: 75 ಸವಾರರಿಗೆ ದಂಡ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಗದಗ ಉಪವಿಭಾಗದ ಡಿಎಸ್‌ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ, ಬೆಟಗೇರಿ ಸಿಪಿಐ ಧೀರಜ್ ಶಿಂಧೆ ಮಾರ್ಗದರ್ಶನದಲ್ಲಿ, ಗದಗ ಸಂಚಾರ ಪೊಲೀಸ್ ಠಾಣೆ-ಯ ಪಿಎಸ್‌ಐ ಕಿರಣಕುಮಾರ ಹಾಗೂ ಸಂಚಾರ ಠಾಣೆ-ಯ ಸಿಬ್ಬಂದಿ ವರ್ಗದವರು ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಂಚರಿಸುವ ದ್ವಿಚಕ್ರ ವಾಹನಗಳ ಮೇಲೆ ವಿಶೇಷ ಕಾರ್ಯಾಚರಣೆ ಕೈಗೊಂಡು ಅವಳಿ ನಗರದಲ್ಲಿ ಭಾರತೀಯ ಮೋಟಾರು ವಾಹನ ಕಾಯ್ದೆಗಳನ್ನು ಉಲ್ಲಂಘನೆ ಮಾಡಿ ಸಂಚರಿಸುವ ವಾಹನಗಳ ತಪಾಸಣೆ ನಡೆಸಿದರು.

ತಪಾಸಣೆಯ ಕಾಲಕ್ಕೆ ನೋಂದಣಿ ಸಂಖ್ಯೆ ಅಳವಡಿಸದೆ, ದೋಷಪೂರಿತ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ವಾಹನ ಚಲಾವಣೆ, ನೋಂದಣಿ ಸಂಖ್ಯೆ ಮೇಲೆ ಸ್ಟಿಕ್ಕರ್ ಅಂಟಿಸಿ ಸಂಚರಿಸಿದ ಒಟ್ಟು 130 ದ್ವಿಚಕ್ರ ವಾಹನಗಳನ್ನು ತಡೆ ಹಿಡಿದಿದ್ದು, ನೋಂದಣಿ ಸಂಖ್ಯೆ ಅಳವಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 53 ವಾಹನಗಳನ್ನು, ದೋಷಪೂರಿತ ನೋಂದಣಿ ಸಂಖ್ಯೆ ಇರುವ ಒಟ್ಟು 65 ಮತ್ತು ಸ್ಟಿಕ್ಕರ್ ಅಂಟಿಸಿ ವಾಹನ ಚಾಲನೆ ಮಾಡಿದ ಒಟ್ಟು 12 ವಾಹನಗಳ ಮೇಲೆ ಥರ್ಡ್ ಐ ಪ್ರಕರಣಗಳು ಇರುವ ಬಗ್ಗೆ ಪರೀಶೀಲನೆ ಮಾಡಿ ಒಟ್ಟು 75 ಪ್ರಕರಣಗಳನ್ನು ಪತ್ತೆ ಹಚ್ಚಿ ದಂಡ ವಿಧಿಸಿದರು.

ಈ ಎಲ್ಲ ಸವಾರರ ಮೇಲೆ ಕಾನೂನು ರೀತಿಯಲ್ಲಿ ಕ್ರಮ ಕೈಗೊಂಡು, ಸವಾರರಿಗೆ ತಿಳಿವಳಿಕೆ ನೀಡಲಾಯಿತು.

# ಅದ್ವೈತಾನುಭವದಲ್ಲಿ 'ಗುರುಪೂರ್ಣಿಮೆ'

■ ವಿಜಯಸಾಕ್ಷಿ ಸುದ್ದಿ, ಗದಗ

ಗುರುವಿನ ಸಾನ್ನಿಧ್ಯ ಹಾಗೂ ಕೃಪೆಯಾಗಬೇಕೆಂದರೆ ಪ್ರತಿಯೊಬ್ಬನೂ ತನ್ನ ಗುರುವಿನ ದರ್ಶನಕ್ಕಾಗಿ ಜೀವನ ಪೂರ್ತಿ ಅಲೆದು ಅರಸಿದಾಗ ಗುರುವಿನ ಕರುಣೆಯಿಂದ ದರ್ಶನ ಭಾಗ್ಯ ದೊರೆತು ಗುರು ಸೇವೆಯಿಂದ ಮುಕ್ತಿ ದೊರೆಯುತ್ತದೆ ಎಂದು ವೇ. ಮೂ. ರತ್ನಾಕರಭಟ್ಟ ಗುರುಗಳು ಅಭಿಪ್ರಾಯಪಟ್ಟರು.

ಇಲ್ಲಿನ ಶ್ರೀ ಶಂಕರಮಠದಲ್ಲಿ ಜರುಗಿದ ಅದ್ವೈತಾನುಭವ-39ರ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ಹುಲಕೋಟಿಯ ಶ್ರೀ ಶಂಕರರ ಅನುಯಾಯಿಗಳಾದ ಶೈಲಜಾ ಅರುಣ ಪಾಟೀಲ ಭಕ್ತಿಸೇವೆಯನ್ನು ವಹಿಸಿಕೊಂಡು ಅದ್ವೈತಪ್ರಸಾರ ಪರಿಷತ್ತು ಪ್ರತಿ ಮಾಸದಲ್ಲಿ ಬರುವ ಸನಾತನ ಹಾಗೂ ವೈದಿಕ ವಿಷೇಶಗಳನ್ನು ಜನರಿಗೆ ತಿಳಿಸಿ ಕೊಡಲು ಅನುಭವಿಗಳು ಹಾಗೂ ವಿದ್ವಾಂಸರನ್ನು ಕರೆದು ಕಾರ್ಯಕ್ರಮ ನಡೆಸುತ್ತಿರುವುದನ್ನು ಸ್ವಾಗತಿಸಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ರಾಮಚಂದ್ರ ಮೋನೆ ನಮಾತನಾಡಿ, ಗುರುಪೂರ್ಣಿಮೆಯಂದು ಎಲ್ಲ ಪಾಲಕ-ಪೊಷಕರು ತಮ್ಮ ಮಕ್ಕಳಿಗೆ, ಮನೆಯಲ್ಲಿರುವ ಕಿರಿಯರಿಗೆ ಸನಾತನ ಧರ್ಮದಲ್ಲಿ ಆಸಕ್ತಿ ಹಾಗೂ ನಮ್ಮ ಸಂಪ್ರದಾಯಗಳನ್ನು



ಅರುಹಬೇಕು ಮತ್ತು ಅವುಗಳ ಆಚರಣೆ, ಅನುಪಾಲನೆ ಮಾಡುವಂತೆ ಪ್ರೋತ್ಸಾಹಿಸಬೇಕು ಎಂದು ನುಡಿದರು. ವಿಜೇತಾ ಕೌಜಲಗಿಯವರಿಂದ ಪ್ರಾರ್ಥನೆ, ಶ್ರಾವಣೀ ಕುಲಕರ್ಣಿಯವರಿಂದ ಶಂಕರ ಮಾಲಿಕೆಯ ಪಠಣ, ಪ್ರೊ. ಅನಿಲ ವೈದ್ಯರಿಂದ ಆದ್ವೈತ ಮಂಥನ ಕಾರ್ಯಕ್ರಮ ನಡೆಯಿತು. ಸನಾತನ ಧರ್ಮದಲ್ಲಿ ವಿಜ್ಞಾನ ಕುರಿತು ಸುಕೃತಿ ಪಾಟೀಲ ವಿವರಣೆ ನೀಡಿದರು. ಸ್ವಾಗತ ಹಾಗೂ ಪರಿಚಯವನ್ನು ರವಿ ಪೂಜಾರ ಮಾಡಿದರೆ, ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಗಣಪತಿ ಕೌಜಲಗಿ ವಂದಿಸಿದರು.

ಕಾರ್ಯಕ್ರಮದಲ್ಲಿ ವೇ.ಮೂ ದತ್ತಂಭಟ್ಟ ತೆಂಬದಮನಿ, ವೇ. ಮೂ ಗಣೇಶಭಟ್ಟ ಪುರಾಣಿಕ, ರವೀಂದ್ರ ಜೋಶಿ, ರಾಜೇಂದ್ರ ಕುಲಕರ್ಣಿ, ಗುರುಮೂರ್ತಿ ದೇಶಪಾಂಡೆ, ಪಿ.ವಿ. ಇನಾಮದಾರ, ಹೇಮಂತ ಕುಲಕರ್ಣಿ, ಕೃಷ್ಣ ಸೊರಟೂರ, ಎಚ್.ಡಿ. ಪಾಟೀಲ, ನಾಗೇಶ ಗುಡಿ, ಅಕ್ಷಯ ಗುಡಿ, ಸ್ನೇಹಾ ಗೋಡಕಿಂಡಿ, ಸುಧಾ ಮೋನೆ, ಅಶ್ವಿನಿ ಪುರಾಣಿಕ, ಪಲ್ಲವಿ ಕುಲಕರ್ಣಿ, ಜ್ಯೋತಿ ಇನಾಮದಾರ, ಶಲಾಕಾ ಹುದ್ದಾರ, ಛಾಯಾ ಕುಲಕರ್ಣಿ ಮುಂತಾದವರು ಹಾಜರಿದ್ದರು.

# ಜುಲೈ 20ರಂದು ಕೊಪ್ಪಳದ ಕೋಟ್ಯಧಿಪತಿ ಪ್ರವೇಶ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ




ಗಣೇಶೋತ್ಸವ ನಿಮಿತ್ತ ನಗರದ ಡಾ.ಸಿಂಪಿ ಲಿಂಗಣ್ಣ ರಸ್ತೆಯ ಶ್ರೀ ಗಜಾನನ ಗೆಳೆಯರ ಬಳಗ 2024ರಿಂದ ಆರಂಭಿಸಿರುವ ಕೊಪ್ಪಳದ ಕೋಟ್ಯಧಿಪತಿ ಕಾರ್ಯಕ್ರಮ ಅಭೂತಪೂರ್ವ ಯಶಸ್ಸು ಕಂಡಿದ್ದು, 2025ರಲ್ಲಿ ಮತ್ತಷ್ಟೂ ಬದಲಾವಣೆಯ, ಹೊಸ ಕನಸುಗಳೊಂದಿಗೆ ಶುರುವಾಗುತ್ತಿದೆ ಎಂದು ಬಳಗದ ಅಧ್ಯಕ್ಷ ಹಾಗೂ ಕ್ವಿಜ್ ಮಾಸ್ಟರ್ ಬಸವರಾಜ ಕರುಗಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ಕಳೆದ ವರ್ಷ ಹೊಸ ಪ್ರಯೋಗದ ಹೆಸರಿನಲ್ಲಿ ಪ್ರಾರಂಭಿಸಿದ ಕೊಪ್ಪಳದ ಕೋಟ್ಯಧಿಪತಿ ಕಾರ್ಯಕ್ರಮ ಜನರ ಮೆಚ್ಚುಗೆ ಗಳಿಸಿದೆ. ಈ ವರ್ಷ ಹೊಸ ರೂಪದೊಂದಿಗೆ ಪ್ರತಿಭಾನ್ವಿತರನ್ನು ಪರಿಚಯಿಸುವ, ಬುದ್ಧಿಮತ್ತೆ ಹೆಚ್ಚಿಸುವ, ಮನರಂಜನೆ ಒದಗಿಸುವ ಜೊತೆಗೆ ವಿಜೇತರಿಗೆ ಪುಸ್ತಕ ಹಾಗೂ ನಗದು ಬಹುಮಾನವನ್ನು ನೀಡುವ ಪರಿಕಲ್ಪನೆ ಹೊಂದಿದೆ. ಕೊಪ್ಪಳದ ಕೋಟ್ಯಧಿಪತಿಯ ಆರಂಭಿಕ ಹಂತ ಸಾಮಾನ್ಯ ಜ್ಞಾನ ಕುರಿತ ಪ್ರವೇಶ ಪರೀಕ್ಷೆ ಜುಲೈ 20ರಂದು ಬೆಳಗ್ಗೆ 10-30ಕ್ಕೆ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ (ಬಿಇಓ ಕಚೇರಿ ಹಿಂದುಗಡೆ, ಅಶೋಕ ಸರ್ಕಲ್ ಹತ್ತಿರ) ನಡೆಯುತ್ತಿದೆ. ಈ ಪ್ರವೇಶ ಪರೀಕ್ಷೆಯು 10 ವರ್ಷದೊಳಗಿನ ಹಾಗೂ 18 ವರ್ಷ ಮೇಲ್ಪಟ್ಟವರಿಗೆ ಎರಡು ವಿಭಾಗಗಳಲ್ಲಿ ನಡೆಯುತ್ತಿದೆ. ಹೆಸರು ನೋಂದಾಯಿಸುವವರು ಪ್ರವೇಶ ಪರೀಕ್ಷೆಯ ದಿನ ಭಾವಚಿತ್ರ ಮತ್ತು ಆಧಾರ್ ಕಾರ್ಡ್‌ನ ನಕಲು ಪ್ರತಿ ತರಬೇಕು. ಜೊತೆಗೆ ಫೋನ್-ಎ-ಫ್ರೆಂಡ್ ಆಯ್ಕೆಗೆ ಇಬ್ಬರ ಹೆಸರು ಮತ್ತು ಸಂಪರ್ಕ ಸಂಖ್ಯೆ ಆಯ್ಕೆ ಮಾಡಿಕೊಂಡು ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು. ಈ ಕುರಿತು ಹೆಚ್ಚಿನ ಮಾಹಿತಿಗೆ ಬಸವರಾಜ ಕರುಗಲ್ (ಮೊಬೈಲ್ ಸಂಖ್ಯೆ-9380605892), ವಿನೋದ ಚಿನ್ನಿನಾಯ್ಕರ್ (ಮೊಬೈಲ್ ಸಂಖ್ಯೆ-9742560716) ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

'ಬಸವ ಸಂಸ್ಕೃತಿ ಅಭಿಯಾನ'ದ ಪೂರ್ವಭಾವಿ ಸಭೆಯಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಬಸವಣ್ಣ ವಿಶ್ವದ ಸಾಂಸ್ಕೃತಿಕ ನಾಯಕ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರ ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣ ಎಂದು ಘೋಷಿಸಿ ಒಂದು ವರ್ಷವಾಗಿದೆ. ಬಸವಣ್ಣನವರು ಕರ್ನಾಟಕ ಮಾತ್ರವಲ್ಲ, ವಿಶ್ವದ ಸಾಂಸ್ಕೃತಿಕ ನಾಯಕರಾಗಿದ್ದಾರೆ. ಕಾರಣ ಅವರು ರಾಜಕೀಯ, ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ನೈತಿಕ, ಸಾಂಸ್ಕೃತಿಕ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಪರಿವರ್ತನೆ ತಂದವರು. ಜಾತಿ, ಮತ, ಲಿಂಗ, ಬಡವ-ಬಲ್ಲಿದ ಎಂಬ ಬೇಧವಿಲ್ಲದ ಸಮಾಜವನ್ನು ನೆಲೆಗೊಳಿಸಿದವರು ಎಂದು ಲಿಂಗಾಯತ ಮಠಾಧೀಶರ ಒಕ್ಕೂಟದ ಮುಖ್ಯಸ್ಥರಾದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಸೆಪ್ಟೆಂಬರ್ 9, 2025ರಂದು ಗದಗ ಜಿಲ್ಲಾ ಕೇಂದ್ರಕ್ಕೆ 'ಬಸವ ಸಂಸ್ಕೃತಿ ಅಭಿಯಾನ' ಆಗಮಿಸಲಿರುವ ಹಿನ್ನೆಲೆಯಲ್ಲಿ ಶ್ರೀ ತೋಂಟ-ದಾರ್ಯ ಮಠದ ಅನುಭವ ಮಂಟಪದಲ್ಲಿ ಆಯೋಜಿಸಿದ್ದ ಸಿದ್ಧತಾ ಸಭೆಯ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ಜೆ.ಎಲ್.ಎಂ. ಜಿಲ್ಲಾ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶರಣ ಕೆ.ಎ.ಬಳಿಗೇರ,




ಮುಂಡರಗಿ ತಾಲೂಕು ಜಾ.ಲಿಂ. ಮಹಾಸಭಾ ಅಧ್ಯಕ್ಷ ನವಲಗುಂದ ಮಾತನಾಡಿದರು.

ಗದಗ ಬೆಟಗೇರಿ ಬಸವದಳದ ಅಧ್ಯಕ್ಷರಾದ ವಿ.ಕೆ. ಕರೇಗೌಡ್ರ ಈ ಅಭಿಯಾನಕ್ಕೆ ಬಸವ ದಳದ ವತಿಯಿಂದ 10 ಸಾವಿರ, ಗಜೇಂದ್ರಗಡ ತಾಲೂಕು ಶ.ಸಾ.ಪ. ಅಧ್ಯಕ್ಷ ಬಸವರಾಜ ಕೊಟಗಿ ತಾಲೂಕಿನ ವತಿಯಿಂದ 25 ಸಾವಿರ, ಬಸವರಾಜ ಹಿರೇಹಡಗಲಿ 25 ಸಾವಿರ, ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ ವೈಯಕ್ತಿಕವಾಗಿ 10 ಸಾವಿರ ರೂ ಹಾಗೂ ಜಾತ್ರಾ ಕಮಿಟಿಯ ವತಿಯಿಂದ 25 ಸಾವಿರ, ಈರಣ್ಣ ಮುದಗಲ್ಲ 5 ಸಾವಿರ, ಪ್ರೊ. ಎನ್.ಎಮ್. ಪವಾಡಿಗೌಡ್ರ 5 ಸಾವಿರ, ಶಿವಕುಮಾರ ರಾಮನಕೊಪ್ಪ 10 ಸಾವಿರ, ಶರಣು ಗದಗ 10 ಸಾವಿರ, ಎಸ್. ಎಸ್. ಕಳಸಾಪೂರಶೆಟ್ರ 5 ಸಾವಿರ, ಎಸ್.ಎಸ್. ಶೆಟ್ಟರ ವಕೀಲರು 25 ಸಾವಿರ, ರತ್ನಕ್ಕ ಪಾಟೀಲ 2 ಸಾವಿರ ಹಾಗೂ ಷಣ್ಮುಖ ನಂದಗಾವಿ 1 ಸಾವಿರ ರೂಪಾಯಿಗಳನ್ನು ಕೊಡುವ ವಾಗ್ದಾನ ಮಾಡಿದರು.

ಸಭೆಯ ಅಧ್ಯಕ್ಷತೆಯನ್ನು ಜೆ.ಎಲ್.ಎಂ. ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಸ್. ಚಟ್ಟಿ ಅವರು ವಹಿಸಿದ್ದರು. ಸಭೆಗೆ ಬಂದವರಿಗೆ ಧನ್ಯವಾದ ಹೇಳಿದರು. ಪಾಲಾಕ್ಷಿ ಗುಣದಿನ್ನಿ, ಬಸವರಾಜ ಅಂಗಡಿ, ಗೌರಕ್ಕ ಬಡಿಗಣ್ಣವರ, ಗಿರಿಜಾ ಹಸಬಿ, ಪ್ರೊ. ಕೆ.ಎಚ್. ಬೇಲೂರ, ಚನ್ನಬಸಪ್ಪ ಕಂಠಿ ಮತ್ತಿತರರು ಮಾತನಾಡಿದರು. ಸಭೆಯಲ್ಲಿ ಜಾ.ಲಿಂ. ಮಹಾಸಭಾ, ಬಸವದಳ, ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಬಸವ ಕೇಂದ್ರ, ತೋಂಟದಾರ್ಯ ಜಾತ್ರಾ ಸಮಿತಿ, ಲಿಂಗಾಯತ ಪ್ರಗತಿಶೀಲ ಸಂಘ, ಯೋಗ ಪಾಠಶಾಲೆ, ಕುಂಬಾರ, ಮಡಿವಾಳ, ಹಡಪದ ಸಮಾಜ, ದಲಿತ, ಪ್ರಗತಿಪರ ಸಂಘಟನೆಗಳ ಪ್ರಮುಖರು, ಎಲ್ಲಾ ತಾಲೂಕುಗಳ ಲಿಂಗಾಯತ, ಬಸವಪರ ಸಂಘಟನೆಗಳ ಮುಖ್ಯಸ್ಥರು ಸಭೆಯಲ್ಲಿ ಭಾಗಿಯಾಗಿದ್ದರು. ಶರಣ ಪ್ರಕಾಶ ಅಸುಂಡಿ ಸ್ವಾಗತಿಸಿದರೆ, ಶರಣೆ ಮಂಜುಳಾ ಹಾಸಿಲಕರ ವಚನ ಮಂಗಲ ಹಾಡಿದರು.

ಇಂಥ ದಾರ್ಶನಿಕರ ಆಶಯದಂತೆ ಸಮಸಮಾಜ ನಿರ್ಮಾಣ, ವ್ಯಸನಮುಕ್ತ ಸಮಾಜ ನಿರ್ಮಾಣ, ಅಂಧಶ್ರದ್ಧೆ ಅಳಿಸಿ ಸುಜ್ಞಾನ ಬೆಳೆಸುವದು, ಸದೃಢ ಸಮಾಜ ಕಟ್ಟುವುದು, ಮಕ್ಕಳಲ್ಲಿ ಆಧ್ಯಾತ್ಮದ ಅರಿವನ್ನು ಮೂಡಿಸುವದು, ಮಹಿಳೆಯರ ಘನತೆಯನ್ನು ಕಾಪಾಡುವದು, ವ್ಯಕ್ತಿತ್ವ ವಿಕಸನ ಇತ್ಯಾದಿ ಈ ಬಸವ ಸಂಸ್ಕೃತಿ ಅಭಿಯಾನದ ಆಶಯಗಳಾಗಿವೆ. ಆದ್ದರಿಂದ ಈ ಅಭಿಯಾನದಲ್ಲಿ ನಾವು ನೀವೆಲ್ಲರೂ ಭಾಗವಹಿಸಿ ಯಶಸ್ವಿಗೊಳಿಸೋಣ. ಈ ಅಭಿಯಾನದ ಕಾರ್ಯಕ್ರಮಕ್ಕೆ ಎಲ್ಲರೂ ತನು, ಮನ, ಧನ ಸಹಾಯ-ಸಹಕಾರ ನೀಡಬೇಕು ಎಂದು ತೋಂಟದ ಶ್ರೀಗಳು ಹೇಳಿದರು.

# ರಸ್ತೆ ಡಾಂಬರೀಕರಣಕ್ಕೆ ಡಾ. ಚಂದ್ರು ಲಮಾಣಿ ಚಾಲನೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ತಾರೀಕೊಪ್ಪ ಗ್ರಾಮದಲ್ಲಿ 80.50ಲಕ್ಷ ವೆಚ್ಚದಲ್ಲಿ ಹೆಬ್ಬಾಳ-ತಾರೀಕೊಪ್ಪ ಜಿಲ್ಲಾ ಮುಖ್ಯ ರಸ್ತೆಯ ಕಿಮೀ 7ರವರೆಗೆ ಆಯ್ದ ಭಾಗಗಳಲ್ಲಿ ಮರು ಡಾಂಬರೀಕರಣ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ತಾಲೂಕಿನ ತಾರೀಕೊಪ್ಪ ಮತ್ತು ಹೆಬ್ಬಾಳ ಗ್ರಾಮದ ಸಂಪರ್ಕ ಕಲ್ಪಿಸುವ ರಸ್ತೆ ದುರಸ್ತಿಯಾಗದೇ ಇರುವುದರಿಂದ ಸಂಚಾರಕ್ಕೆ ತೊಂದರೆಯಾಗಿತ್ತು. ಈ ಬಗ್ಗೆ ಎರಡೂ ಊರುಗಳ ಗ್ರಾಮಸ್ಥರು ಅನೇಕ ಬಾರಿ ರಸ್ತೆ ಸರಿಪಡಿಸುವಂತೆ ವಿನಂತಿಸಿದ್ದರು. ಇದೀಗ ಮರು ಡಾಂಬರೀಕರಣಕ್ಕೆ 80.50 ಲಕ್ಷ ರೂ ಮಂಜೂರಾಗಿದ್ದು, ಶೀಘ್ರವೇ ರಸ್ತೆ ಸುಧಾರಣೆ ಮಾಡಲಾಗುವುದು. ಕಾಮಗಾರಿಯನ್ನು ನಿರ್ವಹಿಸುವ ಗುತ್ತಿಗೆದಾರರು ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಸುರೇಶಗೌಡ ಪಾಟೀಲ, ಹನುಮರೆಡ್ಡಿ ಬುಳ್ಳಪ್ಪನವರ, ಪುರಪ್ಪ ಲಮಾಣಿ, ಶಂಕರ ಭಾವಿ, ಪ್ರವೀಣ ಪಾಟೀಲ, ರಾಜೀವರೆಡ್ಡಿ ಬಮ್ಮನಕಟ್ಟಿ, ಚನ್ನವೀರಗೌಡ ತೆಗ್ಗಿನಮನಿ, ಎಚ್.ಎಚ್. ತಳವಾರ, ಅಣ್ಣಪ್ಪ ರಣತೂರ, ಶಿವನಗೌಡ ಕಂಠಿಗೌಡ್ರ, ಸಿ.ಆರ್. ಪಾಟೀಲ, ಪ್ರಶಾಂತ ರೆಡ್ಡಿ, ಶ್ರೀನಿವಾಸ್ ಸೌದತ್ತಿ, ಮಲ್ಲೇಶ ಲಮಾಣಿ, ದೇವರಾಜ ಮೇಟಿ, ಮಹೇಶ ಲಮಾಣಿ, ಶಿವಾನಂದ ಪೂಜಾರ, ಈರಣ್ಣ ಬಡಿಗೇರ, ಬಾಬು ತಿರುಮಲರೆಡ್ಡಿ, ಗುಡದಪ್ಪ ಸುರಣಗಿ, ಮಲ್ಲು ನಾವಿ, ಮಂಜುನಾಥ ಕರಿಯತ್ತಿನ ಮುಂತಾದವರು ಉಪಸ್ಥಿತರಿದ್ದರು.

'ತಲ್ಕಿ' ನಾಟಕ ಪ್ರದರ್ಶನ, ಕೆ.ವಿ.ಕೆ ಸೇವಾ ಫೌಂಡೇಶನ್ ಉದ್ಘಾಟಿಸಿದ ಸಾಹಿತಿ ಎ.ಎಸ್. ಮಕಾನದಾರ ಅಭಿಪ್ರಾಯ

# ಕಾಯಕ, ಕಲೆಗಳಿಗೆ ಲಿಂಗದ ಹಂಗಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಗಳಮುಖಿಯರ ಜೀವನದ ತಲ್ಲಣಗಳು ಬಡತನ, ಸಿರಿತನ ಭವಿಷ್ಯದ ಭಯವಿಲ್ಲದೆ ಭಾವನೆಗಳಿಗೆ ಬಣ್ಣ ತುಂಬಿ, ನಾರಿಯರ ಅಂಗದ ಅಭಿನಯದಲ್ಲಿ ಗುರುತಿಸಿಕೊಂಡು ಭವ್ಯ ಬದುಕನ್ನೇ ತೊರೆದು, ಭಿಕ್ಷೆಯ ಬದುಕನ್ನು ಆಯ್ಕೆ ಮಾಡಿಕೊಂಡು, ತನ್ನತನದ ಅರಿವಿಗೆ ಮೆರಗನ್ನು ನೀಡಿದವರು. ಮಾನವನಾದ ಮೇಲೆ ಯಾವದೇ ಲಿಂಗವಾಗಲಿ ಕಾಯಕಕ್ಕೆ ಮತ್ತು ಕಲಾ ಕೌಶಲ್ಯಕ್ಕೆ ಲಿಂಗದ ಹಂಗಿಲ್ಲ ಎಂದು ಸಾಹಿತಿ ಎ.ಎಸ್. ಮಕಾನದಾರ ಅಭಿಪ್ರಾಯಪಟ್ಟರು.

ಬೆಂಗಳೂರಿನ ಪಯಣ ಸಂಸ್ಥೆಯು ಕರ್ನಾಟಕ ನವಜ್ಯೋತಿ ಸೇವಾ ಸಂಸ್ಥೆ ನಾಗಾವಿ, ನವಜ್ಯೋತಿ ವ್ಯಸನ ಮುಕ್ತಿ ಹಾಗೂ ಪುನರ್ವಸತಿ ಕೇಂದ್ರ ಗದಗ, ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ ಹಾಗೂ ಕೆ.ವಿ.ಕೆ ಸೇವಾ ಫೌಂಡೇಶನ್ ಗದಗ ಇವುಗಳ ಸಹಯೋಗದಲ್ಲಿ ನವಜ್ಯೋತಿ ವ್ಯಸನ ಮುಕ್ತಿ ಹಾಗೂ ಪುನರ್ವಸತಿ ಕೇಂದ್ರದಲ್ಲಿ 'ತಲ್ಕಿ' ನಾಟಕ ಪ್ರದರ್ಶನ ಹಾಗೂ ಕೆ.ವಿ.ಕೆ ಸೇವಾ ಫೌಂಡೇಶನ್ ಉದ್ಘಾಟನಾ




ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಂಗಳಮುಖಿಯರು ಕಡುಕಷ್ಟವನ್ನು ಮೆಟ್ಟಿನಿಂತು ದಿಟ್ಟವಾಗಿ ಸಮಾಜದಲ್ಲಿ ಅಸ್ತಿತ್ವ ಕಂಡುಕೊಂಡಿದ್ದಾರೆ. ನಮಗೆಲ್ಲಾ ಇದ್ದೂ ನೂರಾರು ವ್ಯಸನಕ್ಕೆ ಬಲಿಯಾಗುತಿದ್ದೇವೆ. ಇದರಿಂದ ಅನಾರೋಗ್ಯಯುತ ಸಮಾಜ ನಿರ್ಮಾಣವಾಗಿದೆ. ಸಮಾಜದ ಜಾಗೃತಿಗಾಗಿ ಸಮಾಜದ ಒಳಿತಿಗಾಗಿ ಕೆ.ವಿ.ಕೆ ಸೇವಾ ಫೌಂಡೇಶನ್ ಅನಾವರಣಗೊಂಡಿದೆ. ಸಮಾಜದ ಬೆಳವಣಿಗೆಗೆ ಮತ್ತು ಸಮಾಜದ ಅಂಕು-ಡೊಂಕು ತಿದ್ದುವಲ್ಲಿ ಫೌಂಡೇಶನ್ ಅಧ್ಯಕ್ಷರಾದ ಕಸ್ತೂರಿ ಕಡಗದವರು ಶ್ರಮಿಸಲಿ ಎಂದು ಹಾರೈಸಿದರು.

ಕಾರಾಗೃಹದ ಅಧೀಕ್ಷಕರಾದ ಈರಣ್ಣ ರಂಗಾಪೂರ ಮಾತನಾಡಿ, ಯಾವುದೋ ಒಂದು ವ್ಯಸನಕ್ಕೆ ಬಲಿಯಾಗಿ ಅದೊಂದೇ ನನ್ನ ಜೀವನ, ಇದನ್ನು ಬಿಟ್ಟರೆ ನನಗೆ ಮುಂದೆ ಬದುಕಿಲ್ಲ ಎನ್ನುವ ಭಾವ ತೊರೆದು ಕಾಯಕ ಮಾಡುವವನಿಗೆ ನೂರಾರು ಕೆಲಸಗಳು. ಇದು ಇಲ್ಲದಿದ್ದರೆ ಇನ್ನೊಂದು ಇದೆ ಎಂಬ ಆತ್ಮಸ್ಥೈರ್ಯ ಹೊಂದಬೇಕು. ನೀವು ಸದೃಢ ಸಮಾಜದ ಶಕ್ತಿಯಾಗಿ ಬೆಳೆಯಬೇಕು. ಕೆಟ್ಟ ವ್ಯಸನ ಮರೆತು ಹೊಸ ಬದುಕನ್ನು ಕಟ್ಟಿಕೊಳ್ಳಿ ಎಂದು ವ್ಯಸನಿಗಳಿಗೆ ಕಿವಿಮಾತುಗಳನ್ನು ಹೇಳಿದರು.

ವೇದಿಕೆಯ ಮೇಲೆ ಗಾಯಕಿ ಪಲ್ಲವಿ ಗಜೇಂದ್ರಗಡ, ಸಾಹಿತಿ ಮರುಳಸಿದ್ದಪ್ಪ ದೊಡ್ಡಮನಿ, ಚಂದ್ರು ನಾವಿ, ನಿರ್ಮಲಾ ತರವಾಡೆ, ಕಸ್ತೂರಿ ಕಡಗದ, ಗಣೇಶ ಕಬಾಡಿ, ಹನಮಂತಗೌಡ ಪಾಟೀಲ, ವ್ಯವಸ್ಥಾಪಕರಾದ ಶ್ವೇತಾ ಕೋಳೆಕರ, ಕುಮಾರ ಈಶ್ವರ ಹಟ್ಟಿ, ಚಾಂದಿನಿ, ಸವಿತಾ, ನಿರ್ದೇಶಕ ಶ್ರೀಜಿತ್ ಸುಂದರಂ, ಮಹಾಲಕ್ಷ್ಮೀ ಉಪಸ್ಥಿತರಿದ್ದರು. ಮಂಗಳಮುಖಿಯರ ಬದುಕನ್ನಾಧರಿಸಿದ ತಲ್ಕಿ ನಾಟಕ ಪ್ರದರ್ಶನ ಜನ ಮನ ಸೆಳೆಯಿತು. ಮಂಗಳಮುಖಿಯರಿಗೆ ವಿಶೇಷ ಗೌರವ ಸಮರ್ಪಿಸಲಾಯಿತು.

ಕೆ.ವಿ.ಕೆ ಫೌಂಡೇಶನ್ ಕಾರ್ಯದರ್ಶಿ ಬಸವರಾಜ ನೆಲಜೇರಿ ನಿರೂಪಿಸಿ ವಂದಿಸಿದರು. ನವಜ್ಯೋತಿ ಸೇವಾ ಸಂಸ್ಥೆಯ ಸರ್ವ ಸಿಬ್ಬಂದಿಗಳು ಕಾರ್ಯಕ್ರಮದ ಯಶಸ್ಸಿಗೆ ಕಾರಣರಾದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ನವಜ್ಯೋತಿ ಸೇವಾ ಸಂಸ್ಥೆಯ ಅಧ್ಯಕ್ಷರಾದ ಬಸವರಾಜ ಬೇವಿನಮರದ ಮಾತನಾಡಿ, ಬುದ್ಧಿವಂತರ ಬದುಕನ್ನು ಬದಲಾಯಿಸಬಹುದು, ಆದರೆ ಬುದ್ಧಿ ಕೆಟ್ಟವರನ್ನು ಬದಲಾಯಿಸಿ ಅವರನ್ನು ಸಮಾಜದಲ್ಲಿ ತಲೆ ಎತ್ತುವಂತೆ ಮಾಡುವದು ಕಠಿಣ. ಇಂತಹ ಅನುಭವಗಳ ಮೂಲಕ ಸಮಾಜದ ನಿರ್ಗತಿಕರನ್ನು ಸಾಕಿ ಸಲುಹಿ, ಮಕ್ಕಳ ಮರೆತಿರುವ ವೃದ್ಧರ ಅಂತ್ಯ ಸಂಸ್ಕಾರ ಮಾಡಿದ್ದೇವೆ. ಅವರ ಆಶೀರ್ವಾದದ ಫಲವೇ ಸಮಾಜ ಸೇವೆಗೆ ಶಕ್ತಿ. ವ್ಯಸನಿಗಳನ್ನು ಬದಲಾಯಿಸುವದೆಂದರೆ ತಪ್ಪಸ್ಸು ಇದ್ದಂತೆ ಎಂದು ತಮ್ಮ ಶ್ರಮದ ಒಳಹುಗಳನ್ನು ತಿಳಿಸಿದರು.

# ಗ್ಯಾರಂಟಿ ಯೋಜನೆ ಸಕಾಲದಲ್ಲಿ ಅರ್ಹರಿಗೆ ತಲುಪಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಗೃಹಲಕ್ಷ್ಮೀ ಯೋಜನೆಯಲ್ಲಿ ಜಿ.ಎಸ್.ಟಿ. ಹಾಗೂ ಮನೆ ಯಜಮಾನಿ ನಿಧನ ಹೊಂದಿದವರ ಹೆಸರನ್ನು ಬದಲಾವಣೆ ಮಾಡಿ ಬೇರೆಯವರಿಗೆ ನೋಂದಣಿ ಮಾಡಿಸಬೇಕು. ಯಾವ ಬಡ ಕುಟುಂಬವೂ ಈ ಯೋಜನೆಯಿಂದ ದೂರ ಉಳಿಯಬಾರದು. ಅಂಗನವಾಡಿ ಕಾರ್ಯಕರ್ತೆಯರಿಂದ ಸರ್ವೆ ಮಾಡಿಸುವುದು ಕಡ್ಡಾಯವಾಗಿದೆ ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚನೆ ನೀಡಿದರು. ಹಿರೇಹಾಳ ಗ್ರಾಮ ಪಂಚಾಯಿತಿಯಲ್ಲಿ ನಡೆದ ರೋಣ ತಾಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು. ರೋಣ ತಾಲೂಕ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ (ಮಿಥುನ್) ಜಿ.ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷ ಪರಶುರಾಮ ಅಳಗವಾಡಿ, ತಾಲೂಕ ಗ್ಯಾರಂಟಿ ಸಮಿತಿಯ ಸದಸ್ಯರಾದ ಶಫೀಕ್ ಮೂಗನೂರ, ಬಿ.ಎಸ್. ರಡ್ಡೇರ, ಸಂಗು ನವಲಗುಂದ, ಮೇಘರಾಜ್ ಬಾವಿ, ಸಿದ್ದಪ್ಪ ಯಾಳಗಿ, ಹನುಮಂತಪ್ಪ ಸ್ವಾಲದ, ನಾಜಬೇಗಂ ಎಲಿಗಾರ, ಬಸವರಾಜ್ ತಳವಾರ, ಸುರೇಶ್ ಬಸವ ರೆಡ್ಡಿರ, ಯಲ್ಲಪ್ಪ ಕಿರೆಸೂರು, ಬಸವರಾಜ್ ಜಗ್ಗಲ, ಶಿವಪ್ಪ ಗಾಣಿಗೇರ, ಗೀತಾ ಕೊಪ್ಪದ, ಶರಣಪ್ಪ ಕುರಿಯವರ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಕರವೇ ಮಹಿಳಾ ಘಟಕದ ಉಪಾಧ್ಯಕ್ಷರ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಕ್ಷಣಾ ವೇದಿಕೆಯ ಮಹಿಳಾ ಘಟಕದ ಗದಗ ಜಿಲ್ಲಾ ಉಪಾಧ್ಯಕ್ಷರನ್ನಾಗಿ ರಾಜೇಶ್ವರಿ ಶಿ. ಹೊಸತೋಟದ ಇವರನ್ನು ನೇಮಕ ಮಾಡಿ ಆದೇಶಿಸಿದೆ.

ಕರ್ನಾಟಕ ರಕ್ಷಣಾ ವೇದಿಕೆಯಲ್ಲಿ ಅನೇಕ ವರ್ಷಗಳಿಂದ ನಾಡು, ನುಡಿ, ನೆಲ, ಕನ್ನಡಪರ ನ್ಯಾಯಕ್ಕಾಗಿ ಹೋರಾಟಗಳನ್ನು ಮಾಡುತ್ತಾ ಬಂದಿರುವ ಇವರನ್ನು ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಹೆಚ್. ಅಬ್ಬಿಗೇರಿಯವರು ಇವರನ್ನು ಗದಗ ಜಿಲ್ಲಾ ಮಹಿಳಾ ಘಟಕದ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ನೀಡಿದ್ದಾರೆ.

# ನೂತನ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕುಸ್ತಿ ಪಟುಗಳ ಕ್ಷೇಮಾಭಿವೃದ್ಧಿ ಅಸೋಸಿಯೇಷನ್‌ನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಗೌರವ ಅಧ್ಯಕ್ಷರಾಗಿ ಆದಪ್ಪ ಮಾರೆಪ್ಪ ಮಾರೆಪ್ಪನವರ ಗದಗ, ಅಧ್ಯಕ್ಷರಾಗಿ ವಸಂತ ಪರಸಪ್ಪ ಸಿದ್ದಮ್ಮನಹಳ್ಳಿ ಗದಗ, ಉಪಾಧ್ಯಕ್ಷರಾಗಿ ರಮೇಶ ಚನ್ನಮಲ್ಲಪ್ಪ ಭಾವಿ ಲಕ್ಕುಂಡಿ, ಉಪಾಧ್ಯಕ್ಷರಾಗಿ ಸೋಮಪ್ಪ ಧರ್ಮಪ್ಪ ಮೇಲ್ಮನಿ ಹಾತಗೇರಿ, ಕಾರ್ಯದರ್ಶಿಯಾಗಿ ಬಾಲೆಸಾಬ ಮಾಬುಸಾಬ ನದಾಫ್ ಹಾರೋಗೇರಿ, ಸಹ ಕಾರ್ಯದರ್ಶಿಯಾಗಿ ಅನಿಕುಮಾರ ಪರಸಪ್ಪ ಸಿದ್ದಮ್ಮನಹಳ್ಳಿ ಗದಗ, ಸಂಘಟನಾ ಕಾರ್ಯದರ್ಶಿಯಾಗಿ ಈಶಪ್ಪ ಜಗ್ಗಲ ರೋಣ, ಖಜಾಂಚಿಯಾಗಿ ಮಹಾಂತೇಶ ಗುಂಜಳ ಮುಳಗುಂದ, ಸದಸ್ಯರಾಗಿ ಬಸವರಾಜ ಹ.ಕರಿಮೇರಿ ಹುಯಿಲಗೋಳ, ಅಬ್ದುಲಖಾದರ ಜೈಲಾನಿ ಅಣ್ಣಿಗೇರಿ ಶಿರಹಟ್ಟಿ, ರವಿಕುಮಾರ ದ್ಯಾಮಣ್ಣ ವಾಲ್ಮೀಕಿ ಬಸಾಪೂರ ಮುಂತಾದವರು ಆಯ್ಕೆಯಾಗಿದ್ದಾರೆ.

# ಉದ್ಯಮಶೀಲತಾ ತಿಳುವಳಿಕೆ ಶಿಬಿರ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರು ಸ್ವಂತ ಉದ್ಯೋಗ ಕೈಗೊಳ್ಳಲು ಆಸಕ್ತಿ ಇರುವ ನಿರುದ್ಯೋಗಿ ಯುವಕ/ಯುವತಿಯರಿಗೆ ಹಾಗೂ ಮಹಿಳೆಯರಿಗಾಗಿ 1 ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಜುಲೈ 14ರಂದು ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳ ಗದಗ ಇಲ್ಲಿ ಏರ್ಪಡಿಸಿದೆ. ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸುವ ಆಸಕ್ತರಿಗೆ ಪ್ರೇರೇಪಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು. ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಕೋರಲಾಗಿದೆ. ಭಾಗವಹಿಸುವವರು ಕನಿಷ್ಠ 18 ವರ್ಷದವರಾಗಿರಬೇಕು ಹಾಗೂ ಓದಲು/ಬರೆಯಲು ಬರುತ್ತಿರಬೇಕು. ಮಹಿಳೆರಿಗೆ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ- ಸಿಡಾಕ್ ಜಿಲ್ಲಾ ಕಛೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಛೇರಿ, ರೂಮ್. ನಂ-106, ಜಿಲ್ಲಾಡಳಿತ ಭವನ, ಗದಗ. ದೂರವಾಣಿ ಸಂ- 77958 55847, 87227 59959 ಅಥವಾ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳ, ದೊಡ್ಡ ಗಡಿಯಾರದ ಹತ್ತಿರ, ಬಸವೇಶ್ವರ ವೃತ್ತ ಗದಗ ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

## ನಿಧನ

**ಸುನಂದಾಬಾಯಿ ತಾಂದಳೆ**



ಲಕ್ಷ್ಮೇಶ್ವರ, ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದ ಹಿರಿಯರಾದ ಸುನಂದಾಬಾಯಿ ಗೋವಿಂದ ತಾಂದಳೆ (66) ಅವರು ಬುಧವಾರ ನಿಧನರಾದರು. ಮೃತರಿಗೆ ಪುತ್ರ, ಪುತ್ರಿ ಸೇರಿ ಅಪಾರ ಬಂಧು-ಬಳಗವಿದೆ.

# ಶಕ್ತಿ ಯೋಜನೆ ಸಂಭ್ರಮಾಚರಣೆ ಬಸ್ ನಿಲ್ದಾಣಗಳಲ್ಲಿ ಬಸ್ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಶಕ್ತಿ ಯೋಜನೆಯೂ ಸಹ ಒಂದಾಗಿದೆ. ಶಕ್ತಿ ಯೋಜನೆಯನ್ನು 11-6-2023ರಿಂದ ಜಾರಿಗೊಳಿಸಿದ್ದು, ಅಂದಿನಿಂದ ರಾಜ್ಯದ ಎಲ್ಲ ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ರಾಜ್ಯ ಸರ್ಕಾರ ಒದಗಿಸಿದೆ. ಇದುವರೆಗೆ 'ಶಕ್ತಿ' ಯೋಜನೆಯ ಫಲಾನುಭವಿಗಳ ಸಂಖ್ಯೆ 500 ಕೋಟಿ ಗಡಿಯನ್ನು ದಾಟಿದೆ. ಶಕ್ತಿ ಯೋಜನೆಯಡಿಯಲ್ಲಿ ನಮ್ಮ ನಾಡಿನ 500 ಕೋಟಿ ಹೆಣ್ಣು ಮಕ್ಕಳು ರಾಜ್ಯದ ಎಲ್ಲಾ ಸರ್ಕಾರಿ ಸ್ವಾಮ್ಯದ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಿರುವ ಹೆಗ್ಗಳಿಕೆಯನ್ನು ಸರಳ ಹಾಗೂ ಸಂಭ್ರಮದಿಂದ ಆಚರಿಸುವುದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಹಾಗೂ ತಾಲೂಕು ಸದಸ್ಯರ ಹಕ್ಕುಭಾದ್ಯವಾಗಿದೆ. ಶಕ್ತಿ ಯೋಜನೆ ಅಡಿಯಲ್ಲಿ 500 ಕೋಟಿ ಫಲಾನುಭವಿಗಳು ಪ್ರಯಾಣಿಸಿರುವುದನ್ನು ಸಾಂಕೇತಿಕವಾಗಿ ಜುಲೈ 14ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಹಾಗೂ ತಾಲೂಕುಗಳ ಬಸ್ ಡಿಪೋ/ಬಸ್ ನಿಲ್ದಾಣ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಆಯಾ ಸಮಿತಿಯ ಸದಸ್ಯರುಗಳು ಒಂದು ಬಸ್ಸಿಗೆ ಪೂಜೆಯನ್ನು ಸಲ್ಲಿಸಿ, ಪ್ರಯಾಣಿಕರಿಗೆ ಸಿಹಿ ಹಂಚುವುದರೊಂದಿಗೆ ಆಚರಿಸಲಾಗುತ್ತಿದೆ.



ಈ ಹಿನ್ನೆಲೆಯಲ್ಲಿ ಗದಗನ ಪಂ. ಪುಟ್ಟರಾಜ ಬಸ್ ನಿಲ್ದಾಣದಲ್ಲಿ ಜುಲೈ 14ರಂದು ಬೆಳಿಗ್ಗೆ 11 ಗಂಟೆಗೆ ಗದಗ ತಾಲೂಕು ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಬಸ್ಸಿಗೆ ಪೂಜೆ ನೆರವೇರಿಸಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ ಗದಗ ತಾಲೂಕು ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು, ಗಣ್ಯರು, ಅಧಿಕಾರಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.



ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜರುಗಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಮಾಣವಚನ ಸ್ವೀಕರಿಸುತ್ತಿರುವುದು.



ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜರುಗಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಮಾಣವಚನ ಸಮಾರಂಭದಲ್ಲಿ ಸಚಿವ ಎಚ್. ಕೆ.ಪಾಟೀಲ ಮಾತನಾಡಿದರು.

### ದೂದನಾನಾ ದರ್ಗಾ ಬಳಿ ರಸ್ತೆ ನಿರ್ಮಾಣ ಕಾಮಗಾರಿಯನ್ನು ತಡೆದು ನಿಲ್ಲಿಸಿದ ಸಾರ್ವಜನಿಕರು

# ಅಂದಾಜು ಪ್ರತಿ ತೋರಿಸಿ ಕಾಮಗಾರಿ ನಡೆಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶಿಗ್ಗಿ ನಾಕಾದಿಂದ ಕೆಂಚಲಾಪೂರವರೆಗೆ ಇರುವ ಮುಖ್ಯ ಬಜಾರ್ ರಸ್ತೆಯಲ್ಲಿ ಮುಳಗುಂದ ಅವರ ಮನೆಯಿಂದ ಕೆಂಚಲಾಪುರ ಓಣಿಯವರೆಗೆ ನಡೆದಿರುವ ರಸ್ತೆ ಕಾಮಗಾರಿಯನ್ನು ಗುಣಮಟ್ಟದಿಂದ ಮಾಡಲಾಗುತ್ತಿಲ್ಲ. ಅಲ್ಲದೆ, ಅಂದಾಜು ಪ್ರತಿ ಇಲ್ಲದೆ ಕಾಮಗಾರಿಯನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿ ಶನಿವಾರ ದೂದನಾನಾ ದರ್ಗಾ ಬಳಿ ಸಾರ್ವಜನಿಕರು ಕಾಮಗಾರಿಯನ್ನು ತಡೆದು ನಿಲ್ಲಿಸಿದ ಘಟನೆ ನಡೆದಿದೆ.

ಮುಳಗುಂದ ಅವರ ಮನೆಯಿಂದ ಕೆಂಚಲಾಪುರ ಓಣಿಯವರೆಗೆ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಲಿಮಿಟೆಡ್ (ಏಖಖಆಐ) ಅಡಿಯಲ್ಲಿ ಸಿಸಿ ರಸ್ತೆ ಅಂದಾಜು 2 ಕೋಟಿ ಮೊತ್ತದ ವೆಚ್ಚದಲ್ಲಿ ಕಾಮಗಾರಿ ನಡೆಯುತ್ತಿದ್ದು, ಗುತ್ತಿಗೆದಾರನ ಬಳಿ ಅಂದಾಜು ಪ್ರತಿ ಇಲ್ಲದೆ ಹಾಗೂ ಒಳಚರಂಡಿ (ಯುಜಿಡಿ) ಕನೆಕ್ಷನ್ ಇಲ್ಲದೆ ಸಿಸಿ ರಸ್ತೆ ನಿರ್ಮಿಸುತ್ತಿರುವುದನ್ನು ಖಂಡಿಸಿ ಸ್ಥಳೀಯರು ಪ್ರತಿಭಟನೆ ನಡೆಸಿದರು.

ಇದಕ್ಕೂ ಮುನ್ನ ಚಾವಡಿಯಿಂದ ಮುಳಗುಂದ ಅವರ ಮನೆಯವರೆಗೂ ನಡೆದಿರುವ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿ ಈ ರಸ್ತೆಯ ಕಾಮಗಾರಿ ಕೈಗೆತ್ತಿಕೊಳ್ಳುವಂತೆ ಆಗ್ರಹಿಸಲಾಗಿತ್ತು. ಆದರೆ ಗುತ್ತಿಗೆದಾರರು ಯಾರ ಮಾತನ್ನೂ ಗಣನೆಗೆ ತೆಗೆದುಕೊಳ್ಳದೆ ಕಾಮಗಾರಿಯನ್ನು ಪ್ರಾರಂಭಿಸಿದ್ದಾರೆ. ಮೊದಲಿದ್ದ ರಸ್ತೆಯನ್ನು ನಿಗದಿತ ಪ್ರಮಾಣದಲ್ಲಿ ತೆಗೆದು ಹಾಕಬೇಕಾಗಿತ್ತು. ಆದರೆ ಹಳೆ ರಸ್ತೆಯ ಮೇಲ್ಪದರವನ್ನು ಮಾತ್ರ ತೆಗೆದು ಅದರ ಮೇಲೆ ಸರಿಯಾಗಿ ಮೊರಂ ಹಾಕದೆ ವೈಟ್‌ಮಿಕ್ಸ್ ಹಾಕಿ ಕಳಪೆ ಮಟ್ಟದಲ್ಲಿ ರಸ್ತೆ ನಿರ್ಮಿಸುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪಿಸಿದರು.

ಈ ವೇಳೆ ಮಾತನಾಡಿದ ಯುವ ಮುಖಂಡರಾದ ಮಂಜುನಾಥ ಮಾಗಡಿ ಮತ್ತು ನಾಗರಾಜ ಚಿಂಚಲಿ, ರಸ್ತೆಯ ಕಾಮಗಾರಿ ತಡೆದು ತೊಂದರೆ ಕೊಡುವದು ನಮ್ಮ ಉದ್ದೇಶವಲ್ಲ. ಕೊಟ್ಯಾಂತರ ರೂಗಳ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ರಸ್ತೆ ಗುಣಮಟ್ಟದಾಗಿರಬೇಕು. ಅಲ್ಲದೆ ಸಿಸಿ ರಸ್ತೆ ಇದಾಗಿದ್ದರಿಂದ ನೀರಿನ ಸಂಪರ್ಕ, ಒಳಚರಂಡಿ ಹಾಗೂ ಸಿಡಿಗಳ ಮರುನಿರ್ಮಾಣ ಸರಿಯಾದ ರೀತಿಯಲ್ಲಿ ನಿರ್ಮಾಣವಾಗದೇ ಇರುವದು ಕಂಡು ಬರುತ್ತಿದೆ. ಇದರ ಅಂದಾಜು ಪ್ರತಿಯನ್ನು ಗುತ್ತಿಗೆದಾರರ ಬಳಿ ಕೇಳಿದರೆ, ಇಂಜಿನಿಯರ್ ಬಳಿ ಇದೆ, ಕೆಆರ್‌ಐಡಿಎಲ್ ಕಚೇರಿಯಲ್ಲಿದೆ, ಇಂದು ಬರುತ್ತೆ ನಾಳೆ ಬರುತ್ತೆ ಎನ್ನುತ್ತಾ ಹಾರಿಕೆ ಉತ್ತರವನ್ನು ನೀಡಿ ಕಳಪೆ ಕಾಮಗಾರಿ ಮಾಡಿ ಅನುದಾನವನ್ನು ಪಡೆದುಕೊಂಡು ಹೋಗುವ ಹುನ್ನಾರವಿದ್ದಂತಿದೆ.



ಅಲ್ಲದೆ ಇದರಲ್ಲಿ ಕೆಲವರಿಗೆ ಕಮೀಷನ್ ಹಣ ಸಂದಾಯವಾಗಿದ್ದು, ಅದಕ್ಕಾಗಿ ಬೇಗ ಕೆಲಸ ಮುಗಿಸಿ ಇಲ್ಲಿಂದ ಹೋಗುವ ಉದ್ದೇಶ ಗುತ್ತಿಗೆದಾರರು ಹೊಂದಿದ್ದು, ಈ ಕಳಪೆ ಕಾಮಗಾರಿಗೆ ಇಲ್ಲಿನ ಜನ ಅವಕಾಶ ನೀಡುವದಿಲ್ಲ. ರಸ್ತೆ ನಿರ್ಮಾಣಕ್ಕೆ ನಿಗದಿಪಡಿಸಿರುವ ಅಂದಾಜು ಪ್ರತಿಯನ್ನು ಜನರ ಮುಂದಿಟ್ಟು ಕಾಮಗಾರಿ ಪ್ರಾರಂಭಿಸಬೇಕೆಂದು ಸ್ಥಳೀಯ ಸಾರ್ವಜನಿಕರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸುಭಾನಸಾಬ್ ಹೊಂಬಳ, ಗಣೇಶ ನೂಲ್ವಿ, ರಾಜು ಲಿಂಬಿಕಾಯಿ, ಈರಣ್ಣ ಹುಲಕೋಟಿ, ಸೋಮು ಕರೆಯತ್ತಿನ, ಲಕ್ಷ್ಮವ್ವ ಕರೆಯತ್ತಿನ, ಶೇಖವ್ವ ನೂಲ್ವಿ, ಲಕ್ಷ್ಮವ್ವ ಬೇವಿನಮರದ, ಲಕ್ಷ್ಮವ್ವ ಕೊಂಗಿ, ಗಿರಿಜವ್ವ ಹರಪನಹಳ್ಳಿ, ರತ್ನವ್ವ ನೂಲ್ವಿ, ಗಿರಿಜವ್ವ ಹುಲಕೋಟಿ, ಚನ್ನವ್ವ ನಾಗಲೂಟಿ, ನೀಲವ್ವ ಹುಲಕೋಟಿ, ಶೈಲಾ ಪಾಣಿಗಟ್ಟಿ ಮುಂತಾದವರಿದ್ದರು.

### ಇನ್ನರ್‌ವೀಲ್ ಸಂಸ್ಥೆಯ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಪ್ರೇಮಾ ಗುಳಗೌಡರ

# ಕ್ಲಬ್‌ನಿಂದ ಸಮಾಜಸೇವೆಗೆ ಉತ್ತಮ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಇನ್ನರ್‌ವೀಲ್ ಸಂಸ್ಥೆಯ 2025-26ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಶನಿವಾರ ನೆರವೇರಿತು. ಸಂಸ್ಥೆಯ 2025-26ನೇ ಸಾಲಿನ ನೂತನ ಅಧ್ಯಕ್ಷೆಯಾಗಿ ಗಿರಿಜಾ ಮುದಗಲ್, ಕಾರ್ಯದರ್ಶಿಯಾಗಿ ನಿರ್ಮಲಾ ಅಡವಿ, ಖಜಾಂಚಿಯಾಗಿ ಮಂಜುಳಾ ಅಕ್ಕಿ ಮತ್ತು ಐಎಸ್‌ಓ ಮೈತ್ರಾದೇವಿ ಹಿರೇಮಠ ಹಾಗು ಎಡಿಟರ್ ಆಗಿ ಡಾ. ಶೃತಿ ಹೂವಿನ ಅಧಿಕಾರ ಸ್ವೀಕರಿಸಿದರು.

ಗದಗ ಇನ್ನರ್‌ವೀಲ್ ಸಂಸ್ಥೆಯ ಪಿಡಿಸಿ ಪ್ರೇಮಾ ಗುಳಗೌಡರ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇನ್ನರ್‌ವೀಲ್ ಸಂಸ್ಥೆ ಒಂದು ಅಂತಾರಾಷ್ಟ್ರೀಯ ಸಂಸ್ಥೆಯಾಗಿದ್ದು, ಲಕ್ಷಾಂತರ ಸದಸ್ಯರು ಇದರಲ್ಲಿ ಸೇವಾ ರೂಪದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಬಡ ಜನರಿಗಾಗಿ ಸಹಾಯಹಸ್ತ ಚಾಚುವ ಮನಸ್ಸು ಇದ್ದವರಿಗೆ ಇನ್ನರ್‌ವೀಲ್ ಸಂಸ್ಥೆ ಸಹಕಾರಿಯಾಗಿದೆ. ಸಮಾಜದಲ್ಲಿ ನಮ್ಮಿಂದ ನಾಲ್ಕು ಜನಕ್ಕೆ ಒಳ್ಳೆಯದಾಗುವುದನ್ನು ಬಯಸಬೇಕು ಎನ್ನುವವರಿಗೆ ಕ್ಲಬ್ ಒಳ್ಳೆಯ ಅವಕಾಶವನ್ನು ಕಲ್ಪಿಸಿಕೊಡುತ್ತದೆ. ಲಕ್ಷ್ಮೇಶ್ವರ ಸಂಸ್ಥೆ ಕಳೆದ 15 ವರ್ಷಗಳಿಂದ ನಿರಂತರವಾಗಿ ಉತ್ತಮ ಕಾರ್ಯಗಳನ್ನು ಮಾಡುತ್ತಿರುವದು ಶ್ಲಾಘನೀಯ ಎಂದರು.

ನೂತನ ಅಧ್ಯಕ್ಷೆ ಗಿರಿಜಾ ಮುದಗಲ್ ಮಾತನಾಡಿ, ಸಂಸ್ಥೆಯಲ್ಲಿ ಸೇವೆ ಸಲ್ಲಿಸಲು ಅಂತಾರಾಷ್ಟ್ರೀಯ ಮಟ್ಟದ ಅವಕಾಶ ದೊರಕಿರುವದು ನಮ್ಮ ಭಾಗ್ಯವಾಗಿದೆ. ನನ್ನ ಅಧಿಕಾರವಧಿಯಲ್ಲಿ ಸಂಸ್ಥೆಯು ಹಾಕಿಕೊಟ್ಟ ಮಾರ್ಗದಲ್ಲಿ ಕಾರ್ಯಗಳನ್ನು ಮಾಡುವದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಆರು ಜನ ಸದಸ್ಯರಾಗಿ ಸಂಸ್ಥೆಗೆ ಸೇರ್ಪಡೆಗೊಂಡರು. ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಲಾಯಿತು. ಮಂಜುಳಾ ಓದುನವರ ಪ್ರಾರ್ಥಿಸಿದರು. ಅಧ್ಯಕ್ಷೆ ರೇಖಾ ವಡಕಣ್ಣವರ ಸ್ವಾಗತಿಸಿದರು, ಸುಲೋಚನಾ ಜವಾಯಿ ಪರಿಚಯಿಸಿದರು. ಜಯಶ್ರೀ ಮೆಳ್ಳಿಗೇರಿ ನಿರೂಪಿಸಿದರು. ಅಪೂರ್ವ ಪಾಟೀಲ, ದೀಪಿಕಾ ಪಾಟೀಲ, ಶಕುಂತಲಾ ಅಳಗವಾಡಿ, ನಿರ್ಮಲಾ ಅರಳಿ, ಅನ್ನಪೂರ್ಣ ಓದುನವರ, ಡಾ. ಸುಜಾತಾ ಸಂಗೂರ, ಕುಸುಮಾ, ಜಯಲಕ್ಷ್ಮೀ ಮಹಾಂತಶೆಟ್ಟರ, ಶೈಲಾ ಆದಿ ಮುಂತಾದವರು ಉಪಸ್ಥಿತರಿದ್ದರು.



ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷೆ ಹಾಗೂ ಹಿರಿಯ ಸದಸ್ಯೆಯಾಗಿರುವ ಮಾಲಾದೇವಿ ದಂದರಗಿ ಪ್ರಾಸ್ತಾವಿಕವಾಗಿ ಮಾತನಾಡಿ, ಇನ್ನರ್‌ವೀಲ್ ಸಂಸ್ಥೆ ಪಟ್ಟಣದಲ್ಲಿ 15 ವರ್ಷಗಳ ಹಿಂದೆ ಪ್ರಾರಂಭವಾದಾಗಿನಿಂದ ಹಲವಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಹಮ್ಮಿಕೊಂಡು ಬಂದಿದೆ. ಸಂಸ್ಥೆಯಿಂದ ಶೈಕ್ಷಣಿಕ, ಸಾಮಾಜಿಕ, ಆರೋಗ್ಯ, ಪರಿಸರ ಇತ್ಯಾದಿ ಕಾರ್ಯಕ್ರಮಗಳು ಎಲ್ಲ ಸದಸ್ಯರ ಸಹಕಾರದಿಂದ ಯಶಸ್ವಿಯಾಗಿ ಮಾಡಲಾಗುತ್ತಿದೆ ಎಂದರು.

# ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜಾಥಾ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ತಾಲೂಕಾ ಆಸ್ಪತ್ರೆ ಹಾಗೂ ದುಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆ ಗದಗ ಆವರಣದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ-2025ರ ನಿಮಿತ್ತ ಜಾಥಾ ಕಾರ್ಯಕ್ರಮ ಜರುಗಿತು. ಜಿಲ್ಲಾ ಕುಟುಂಬ ಕಲ್ಯಾಣ ಯೋಜನಾ ಅಧಿಕಾರಿ ಡಾ. ವಾಯ್.ಕೆ. ಭಜಂತ್ರಿ ಹಾಗೂ ಜಿಲ್ಲಾ ಸಮೀಕ್ಷಣಾ ಅಧಿಕಾರಿ ಡಾ. ವೆಂಕಟೇಶ ರಾಠೋಡ ಹಸಿರು ನಿಶಾನೆ ತೋರಿಸಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ. ಜಾಧವ ಮತ್ತು ರೂಪಸೇನ ಚವ್ಹಾಣ, ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಪುಷ್ಪಾ ಪಾಟೀಲ, ವಾಯ.ಕೆ. ಹಕ್ಕಿ, ಎಸ್.ಹೆಚ್.ಐ.ಓ ಸರೋಜಾ ಕಟ್ಟಿಮನಿ, ಎಲ್.ಹೆಚ್.ವಿ ಸಿದ್ದಪ್ಪ ಲಿಂಗದಾಳ, ಹೆಚ್.ಐ.ಓ, ಡಿ.ಸಿ. ಹಿರೇಹಾಳ ಹೆಚ್.ಐ.ಓ, ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ರಾಷ್ಟ್ರೀಯ ಖಾದ್ಯತೈಲ ಎಣ್ಣೆಕಾಳು ಅಭಿಯಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ವಿವಿಧ ಯೋಜನೆಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ರಾಮಣ್ಣ ಹೂವಣ್ಣವರ ಹೇಳಿದರು.

ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ 2025-26ನೇ ಸಾಲಿನ ರಾಷ್ಟ್ರೀಯ ಖಾದ್ಯತೈಲ ಎಣ್ಣೆಕಾಳು ಅಭಿಯಾನ ಯೋಜನೆಯಲ್ಲಿ ಸೂರ್ಯಕಾಂತಿ ಬೀಜಗಳ ಕಿರುಚೀಲಗಳನ್ನು ವಿತರಿಸಿ ಮಾತನಾಡಿದರು.

ರೈತರು ಸರ್ಕಾರದ ಯೋಜನೆಗಳನ್ನು ಪಡೆಯುವ ಮೂಲಕ ಆರ್ಥಿಕವಾಗಿ ಸದೃಢವಾಗಬಹುದು. ಅಲ್ಲದೆ, ಕೃಷಿ ಇಲಾಖೆಯು ನೀಡುವ ಹಲವಾರು ಮಾಹಿತಿಗಳ ಅನ್ವಯ ರೈತರು ತಮ್ಮ ಬೆಳೆಗಳಗಳನ್ನು ರಕ್ಷಣೆ ಮಾಡಬಹುದು. ಆದ್ದರಿಂದ ರೈತರು ಸರ್ಕಾರದ ಯೋಜನೆಗಳನ್ನು ಪಡೆಯಲು ಮುಂದೆ ಬರಬೇಕು ಎಂದು ಹೇಳಿದರು.

ಕೃಷಿ ಅಧಿಕಾರಿಗಳಾದ ಬಸವರಾಜೇಶ್ವರಿ ಸಜ್ಜನರ ಮಾತನಾಡಿ, ಜಿಲ್ಲೆಯಲ್ಲಿ ಎಣ್ಣೆಕಾಳು ಬೆಳೆಗಳ ವಿಸ್ತೀರ್ಣವನ್ನು ಹೆಚ್ಚಿಸುವುದು ಈ ಯೋಜನೆ ಮುಖ್ಯ ಉದ್ದೇಶವಾಗಿದೆ. ಅಟಲ್ ಭೂ ಜಲ ಯೋಜನೆಯಡಿ ಸೂಕ್ಷ್ಮ ನೀರಾವರಿ ಘಟಕಗಳು ಲಭ್ಯವಿದ್ದು, ರೈತರು ರೈತ ಸಂಪರ್ಕ ಕೇಂದ್ರ ಬೆಟಗೇರಿಗೆ ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಗದಗ ತಾಲೂಕ ಕೃಷಿಕ ಸಮಾಜದ ಉಪಾಧ್ಯಕ್ಷ ಎಂ.ಎಸ್. ಮಲ್ಲಾಪುರ ಮಾತನಾಡಿದರು. ಈ ಸಂದರ್ಭದಲ್ಲಿ ಚನ್ನಪ್ಪ ಹುಬ್ಬಳ್ಳಿ, ವೆಂಕಟೇಶ ದೋಂಗಡೆ, ಪ್ರಸನ್ನಗೌಡ ಮಲ್ಲಾಪೂರ, ಚಂದ್ರಗೌಡ ಪಾಟೀಲ, ಚಂದ್ರಶೇಖರ ವಸ್ತ್ರದ, ಮಲ್ಲಿಕಾರ್ಜುನ ರಾಯಚೂರ, ಶಿವು ಟೆಂಗಿನಕಾಯಿ, ಮಹಾಂತೇಶ ಕಮತರ, ನಿಂಗಪ್ಪ ಮಣ್ಣೂರ, ಪಂಚಪ್ಪ ಬಳಿಗೇರ, ಅಂದಪ್ಪ ಮೆಣಸಿನಕಾಯಿ, ಮಂಜುನಾಥ ಸಜ್ಜನ, ಗೌರಮ್ಮ ಲಕ್ಕುಂಡಿ ಸೇರಿದಂತೆ ಲಕ್ಕುಂಡಿ ಗ್ರಾಮದ ನೂರಾರು ರೈತರು ಪಾಲ್ಗೊಂಡಿದ್ದರು.




### ಸಖಿ ಸಹೇಲಿ ಸಂಘಟನೆಯಿಂದ ಸಾಧಕ ಮಹಿಳೆಗೆ ಸನ್ಮಾನ

# ಪ್ರತಿಯೊಬ್ಬರೂ ಸಾಧಕರಾಗಲು ಕ್ರಿಯಾಶೀಲರಾಗೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳೆಯರು ಇಂದು ಎಲ್ಲ ಕ್ಷೇತ್ರಗಳಲ್ಲಿ ಸಾಧನೆಗೈದಿದ್ದು ಹೆಮ್ಮೆಯ ಸಂಗತಿ. ಸಾಧಕ ಮಹಿಳೆಯರನ್ನು ಸಮಾಜವು ಗುರುತಿಸಿ ಗೌರವಿಸಿದರೆ ಅವರಿಗೆ ನಾವು ಇನ್ನಷ್ಟು ಪ್ರೋತ್ಸಾಹ ನೀಡಿದಂತಾಗುತ್ತದೆ. ಅವರಂತೆಯೇ ನಾವೂ ಸಹಿತ ಸಾಧಕರಾಗಲು ಕ್ರಿಯಾಶೀಲರಾಗೋಣ ಎಂದು ಗದಗ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಂಘಟನೆಯ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಗದುಗಿನ ಹಾಲಕೇರಿ ಮಠದ ಆವರಣದಲ್ಲಿ ಗದಗ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಂಘಟನೆಯಿಂದ ಜರುಗಿದ ಸಾಧಕ ಮಹಿಳೆಗೆ ಸನ್ಮಾನ ಕಾರ್ಯಕ್ರಮದಲ್ಲಿ ಜಯಶ್ರೀ ಉಗಲಾಟದ ಅವರನ್ನು ಸನ್ಮಾನಿಸಿ ಮಾತನಾಡಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ಉಪಾಧ್ಯಕ್ಷರಾಗಿ ಜಯಶ್ರೀ ಅವರು ಆಯ್ಕೆಯಾಗಿದ್ದು ನಮಗೆಲ್ಲ ಸಂತಸ ತಂದಿದೆ. ಇಂತಹ ಮಹಿಳೆಯರು ನಮಗೆ ಆದರ್ಶರು. ಪ್ರತಿಯೊಬ್ಬ ಮಹಿಳೆಯರು ಕುಟುಂಬ ನಿರ್ವಹಣೆಯ ಜೊತೆಗೆ ಸಾಮಾಜಿಕವಾಗಿ ಕಾರ್ಯ ಪ್ರವೃತ್ತರಾಗಬೇಕು ಎಂದರು.

ಮಧು ಕರಬಿಷ್ಠಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜಮುಖಿ ಕಾರ್ಯಗಳಿಂದ ನಾವು ಜನರ ಮನದಲ್ಲಿ ಇರುತ್ತೇವೆ. ಸಮಾಜ ಸೇವಕರನ್ನು ಸಮೂಹವು ಗುರುತಿಸಿ ಜವಾಬ್ದಾರಿಯುತ ಸ್ಥಾನ ನೀಡಿ ಗೌರವಿಸುತ್ತದೆ. ನಾವು ನಮ್ಮೊಂದಿಗೆ ಇತರರನ್ನು ಸಹಿತ ಇಂತಹ ಸಮಾಜಮುಖಿ ಕೆಲಸಗಳಿಗೆ ಜೊತೆಗೂಡಿಸಿಕೊಂಡು ಸಾಗಬೇಕು ಎಂದರು.

ಪ್ರಿಯಾಂಕಾ ಹಳ್ಳಿ ಮತ್ತು ರೇಖಾ ರೊಟ್ಟಿ ಪ್ರಾರ್ಥಿಸಿದರು. ನಿರ್ಮಲಾ ಪಾಟೀಲ ಸ್ವಾಗತಿಸಿದರು. ಅಶ್ವಿನಿ ಮಾದಗುಂಡಿ ನಿರೂಪಿಸಿದರು. ಸುಗ್ಗಲಾ ಯಳಮಲಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮಾಧುರಿ ಮಾಳೆಕೊಪ್ಪ, ಶಶಿಕಲಾ ಮಾಲಿಪಾಟೀಲ, ಸುಷ್ಮಿತಾ ವೆರ್ಣೇಕರ, ಚಂದ್ರಕಲಾ ಸ್ಥಾವರಮಠ, ಶ್ರೀದೇವಿ ಮಹೇಂದ್ರಕರ, ವಿದ್ಯಾ ಶಿವನಗುತ್ತಿ, ಶೋಭಾ ಹಿರೇಮಠ, ಜಯಶ್ರೀ ಪಾಟೀಲ, ರೇಣುಕಾ ಅಮಾತ್ಯ, ವಿದ್ಯಾ ಗಂಜಿಹಾಳ, ಪದ್ಮಿನಿ ಮುಂತಾದವರು ಉಪಸ್ಥಿತರಿದ್ದರು.




ಸನ್ಮಾನ ಸ್ವೀಕರಿಸಿ ಮಾತನಾಡಿದ ಜಯಶ್ರೀ ಉಗಲಾಟದ, ನಮ್ಮ ಸಾಧನೆಗೆ ನಿರಂತರ ಪ್ರಯತ್ನ, ಆತ್ಮೀಯರ ಸಹಕಾರ, ಕುಟುಂಬದವರ ಪ್ರೋತ್ಸಾಹದಿಂದ ವಿವಿಧ ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳುವ ಅವಕಾಶ ಒದಗಿ ಬಂದಿತು. ಕೊಟ್ಟ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಲು ಪ್ರಯತ್ನಿಸುವೆ ಎಂದರು.

# ಶಕ್ತಿ ಯೋಜನೆ ಸಂಭ್ರಮಾಚರಣೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಶಕ್ತಿ ಯೋಜನೆಯೂ ಸಹ ಒಂದಾಗಿದೆ. ಶಕ್ತಿ ಯೋಜನೆಯನ್ನು 11-06-2023ರಿಂದ ಜಾರಿಗೊಳಿಸಿದ್ದು, ಅಂದಿನಿಂದ ರಾಜ್ಯದ ಎಲ್ಲ ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ರಾಜ್ಯ ಸರ್ಕಾರ ಒದಗಿಸಿದೆ.

ಇದುವರೆಗೆ 'ಶಕ್ತಿ' ಯೋಜನೆಯ ಫಲಾನುಭವಿಗಳ ಸಂಖ್ಯೆ 500 ಕೋಟಿ ಗಡಿಯನ್ನು ದಾಟಿದ್ದು, ಇದೊಂದು ಸಂಭ್ರಮದ ಸಂಗತಿ. ಶಕ್ತಿ ಯೋಜನೆಯಡಿಯಲ್ಲಿ ನಮ್ಮ ನಾಡಿನ 500 ಕೋಟಿ ಹೆಣ್ಣು ಮಕ್ಕಳು ರಾಜ್ಯದ ಎಲ್ಲಾ ಸರ್ಕಾರಿ ಸ್ವಾಮ್ಯದ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಿರುವ ಹೆಗ್ಗಳಿಕೆಯನ್ನು ಸರಳ ಹಾಗೂ ಸಂಭ್ರಮದಿಂದ ಆಚರಿಸುವುದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಹಾಗೂ ತಾಲೂಕು ಸದಸ್ಯರ ಹಕ್ಕುಭಾದ್ಯವಾಗಿದೆ.

ಈ ಹಿನ್ನೆಲೆಯಲ್ಲಿ ಸಾಂಕೇತಿಕವಾಗಿ ಜುಲೈ 14ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಹಾಗೂ ತಾಲೂಕುಗಳ ಬಸ್ ಡಿಪೊ/ಬಸ್ ನಿಲ್ದಾಣ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಆಯಾ ಸಮಿತಿಯ ಸದಸ್ಯರುಗಳು ಒಂದು ಬಸ್ಸಿಗೆ ಪೂಜೆಯನ್ನು ಸಲ್ಲಿಸಿ, ಪ್ರಯಾಣಿಕರಿಗೆ ಸಿಹಿ ಹಂಚುವುದರೊಂದಿಗೆ ಆಚರಿಸಲಾಗುತ್ತಿದೆ.

ಗದಗ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಜುಲೈ 14ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ. ಅಸೂಟಿ ಅವರು ಬಸ್ಸಿಗೆ ಪೂಜೆ ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು, ಗಣ್ಯರು, ವಿವಿಧ ಅಧಿಕಾರಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.





ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜರುಗಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಮಾಣವಚನ ಸಮಾರಂಭದಲ್ಲಿ ಯುವ ಘಟಕದ ಅಧ್ಯಕ್ಷ ಕೆ.ಎಚ್ ಪಾಟೀಲ ಮಾತನಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka